ನಿಮ್ಮ ನಂಬಿಕೆಯ ಧ್ವನಿ
# ಧೈರ್ಯದ ದಾರಿ
DAIRYADA DAARI NEWS PAPER
ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ
Cell : 9036887793
KANNADA DAILY NEWS PAPER
ಕನ್ನಡ ದಿನಪತ್ರಿಕೆ
DAIRYADA DAARI

ಸಂಪುಟ: 01 | ಸಂಚಿಕೆ: 32 | ಗುರುವಾರ : 27-11-2025 | ರಾಯಚೂರು | RNI NO: KNKAN/25/A2795 | ಪುಟ: 4 | ಬೆಲೆ: ರೂ: 4-00
VOLUME: 01 | ISSUE: 32 | THURSDAY : 27-11-2025 | RAICHUR | EMAIL: DAIRYADADAARI@GMAIL.COM | PAGE: 4 | PRICE: Rs: 4-00

## ಗಗನಯಾತ್ರಿಕರಿಗೆ ಶುಭಾ ಹಾರೈಸಿದ ಸಚಿವ NSB.



ಮಾನವ ಬಾಹ್ಯಾಕಾಶ ಯಾನ ಅಕ್ಸಿಯಂ ಸ್ಪೇಸ್-4 ಅನ್ನು ಯಶಸ್ವಿಯಾಗಿ ಪೂರೈಸಿ, ದೇಶದ ಹಿರಿಮೆಯನ್ನು ಹೆಚ್ಚಿಸಿದ ನಮ್ಮೆಲ್ಲರ ಹೆಮ್ಮೆಯ ಗಗನಯಾತ್ರಿ ಶ್ರೀ ಶುಭಾಂಶು ಶುಕ್ಲಾ ಅವರನ್ನು ಇಂದು, ಸನ್ಮಾನ್ಯ ಮುಖ್ಯಮಂತ್ರಿಗಳಾದ ಶ್ರೀ ಸಿದ್ದರಾಮಯ್ಯನವರೊಂದಿಗೆ, ವಿಧಾನಸೌಧದ ಮುಖ್ಯಮಂತ್ರಿಗಳ ಕಚೇರಿಯಲ್ಲಿ ಆತ್ಮೀಯವಾಗಿ ಸನ್ಮಾನಿಸಿ, ಗೌರವಿಸಲಾಯಿತು. ಈ ಸಂದರ್ಭದಲ್ಲಿ, ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರಾದ ಶ್ರೀ ಮಧುಬಂಗಾರಪ್ಪ, ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರಾದ ಶ್ರೀ ಡಾ. ಶರಣ ಪ್ರಕಾಶ್ ಆರ್. ಪಾಟೀಲ್ ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

# ಮನುವಾದಿಗಳು, ಸಂವಿಧಾನ ವಿರೋಧಿಗಳು

**ಬೆಂಗಳೂರು,ನ.26–** ದೇಶದಲ್ಲಿರುವ ಸಂವಿಧಾನ ವಿರೋಧಿ ಮನುವಾದಿಗಳನ್ನು ಗುರುತಿಸಿ ಎಂದು ಎಚ್ಚರಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಅಂಬೇಡ್ಕರ್ ಅವರ ಸಂವಿಧಾನಕ್ಕೆ ಮೊದಲು ದೇಶದಲ್ಲಿ ಅಲಿಖಿತ ಮನುಸ್ಮೃತಿ ಜಾರಿಯಲ್ಲಿತ್ತು ಎಂದಿದ್ದಾರೆ.

ಸಮಾಜ ಕಲ್ಯಾಣ ಇಲಾಖೆ ವತಿಯಿಂದ ವಸಂತ ನಗರದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಆಯೋಜಿಸಿದ್ದ "ಸಂವಿಧಾನ ದಿನಾಚರಣೆ 2025" ಅನ್ನು ಉದ್ಘಾಟಿಸಿ, ಸಂವಿಧಾನ ಶಿಲ್ಪಿ ಬಾಬಾ ಸಾಹೇಬರಿಗೆ ನಮಿಸಿ ಮಾತನಾಡಿಅವರು

ಅಂಬೇಡ್ಕರ್ ಅವರ ಸಂವಿಧಾನಕ್ಕೆ ಮೊದಲು ದೇಶದಲ್ಲಿ ಅಲಿಖಿತ ಮನುಸ್ಮೃತಿ ಜಾರಿಯಲ್ಲಿತ್ತು. ಮನುಸ್ಮೃತಿಯಲ್ಲಿದ್ದ ಮನುಷ್ಯ ವಿರೋಧಿ, ಸಮಾನತೆ ವಿರೋಧಿ ನಿಯಮಗಳಿಗೆ ಅಂಬೇಡ್ಕರ್ ಅವರ ಸಂವಿಧಾನದಲ್ಲಿ ಅವಕಾಶ ಇಲ್ಲದಂತಾಯಿತು. ಅದಕ್ಕೇ ಮನುವಾದಿಗಳು ನಮ್ಮ ಸಂವಿಧಾನವನ್ನು ವಿರೋಧಿಸುತ್ತಾರೆ. ಎಂದರು

ಸಮ ಸಮಾಜ ನಿರ್ಮಾಣ, ಅಸಮಾನತೆ ನಿವಾರಣೆ ನಮ್ಮ ಸಂವಿಧಾನ ಮತ್ತು ಅಂಬೇಡ್ಕರ್ ಅವರ ಆಶಯವಾಗಿತ್ತು. ಎಂದು ಅವರು ಹೇಳಿದರು

ನಾವು ಭಾರತೀಯರು ಎನ್ನುವುದೇ ನಮ್ಮ ಸಂವಿಧಾನದ ಮೂಲ ಮಂತ್ರಈ ದೇಶದ ಜನತೆಗೆ ಎಂಥಾ ಸಂವಿಧಾನ ಬೇಕು ಎನ್ನುವ ಬಗ್ಗೆ ಒಂದು ವರ್ಷ ಕಾಲ ಸಂವಿಧಾನ ಸಭೆಯಲ್ಲಿ ಸಮಗ್ರ ಚರ್ಚೆ ಬಳಿಕ ಅಂಗೀಕರಿಸಲಾಗಿದೆ. ಎಂದುಹೇಳಿದರು

ಫೆಡರಲ್, ಯೂನಿಟರಿ, ರಿಟರ್ನ್, ಅನ್ ರಿಟರ್ನ್ ಸಂವಿಧಾನಗಳು ವಿಶ್ವದಲ್ಲಿವೆ. ನಮ್ಮದು ಲಿಖಿತ ಸಂವಿಧಾನ. ನಮ್ಮ ದೇಶದಲ್ಲಿರುವಷ್ಟು ಜಾತಿ, ಧರ್ಮಗಳು ಬೇರೆ ಯಾವ ದೇಶದಲ್ಲೂ ಇಲ್ಲ. ಹೀಗಾಗಿ ಈ ನೆಲಕ್ಕೆ ಒಪ್ಪಿಗೆಯಾಗುವ ಸಂವಿಧಾನವನ್ನು ಅಂಬೇಡ್ಕರ್ ಕೊಟ್ಟರು.ಮನುವಾದಿಗಳು ಸಂವಿಧಾನ ಅಂಬೇಡ್ಕರ್ ಅವರಿಂದ ಆಗಿಲ್ಲ ಎಂದು ವಾದಿಸುತ್ತಾರೆ. ಆದರೆ ಅಂಬೇಡ್ಕರ್ ಅವರೇ ಸಂವಿಧಾನ (2ನೇ ಪುಟಕ್ಕೆ)



ನಗರದ ವಸಂತನಗರದ ಅಂಬೇಡ್ಕರ್ ಭವನದಲ್ಲಿ ಇಂದು ನಡೆದ ಸಂವಿಧಾನ ದಿನಾಚರಣೆ ಕಾರ್ಯಕ್ರಮದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ರವರ ಭಾವಚಿತ್ರಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಪುಷ್ಪ ನಮನ ಸಲ್ಲಿಸಿದರು. ಸಚಿವರಾದ ಡಾ. ಹೆಚ್.ಸಿ. ಮಹದೇವಪ್ಪ, ಕೆ.ಹೆಚ್. ಮುನಿಯಪ್ಪ, ಮಾಜಿ ವಿಧಾನ ಪರಿಷತ್ ಸದಸ್ಯ ಎಂ.ಸಿ. ವೇಣುಗೋಪಾಲ್ ಮತ್ತಿತರರು ಉಪಸ್ಥಿತರಿದ್ದರು.

## ದೇಶದ ಬಹುತ್ವ ರಕ್ಷಣೆ ಸಂವಿಧಾನದಿಂದ ಮಾತ್ರ ಸಾಧ್ಯ. ಡಾ.ಡಾ. ಜೆ. ಎಲ್. ಈರಣ್ಣ



**ಮಾನ್ವಿ,ನ.26–** ಪಟ್ಟಣದ ಬಾಷಾಮಿಯ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಆಯೋಜಿಸಿದ್ದ 76ನೇ ಸಂವಿಧಾನ ದಿವಸ ಕಾರ್ಯಕ್ರಮ ಅಂಗವಾಗಿ ಡಾ. ಬಿ.ಆರ್. ಅಂಬೇಡ್ಕರ್ ರವರ ಭಾವಚಿತ್ರಕ್ಕೆ ಪುಷ್ಪ ಸಮರ್ಪಿಸಿ ಕಾಲೇಜಿನ ಪ್ರಾಚಾರ್ಯ ಡಾ.ಜೆ.ಎಲ್.ಈರಣ್ಣ ಮಾತನಾಡಿ ಬಹು ಸಂಸ್ಕೃತಿ ಬಹು ಭಾಷೆಗಳನ್ನು ಒಳಗೊಂಡ ಭಾರತ ದೇಶ ಒಂದು ವಿಶಿಷ್ಟವಾದ ದೇಶವಾಗಿದೆ ಇಂತಹ ದೇಶಕ್ಕೆ ಡಾ. ಬಿ.ಆರ್. ಅಂಬೇಡ್ಕರ್ ನೇತೃತ್ವದಲ್ಲಿ ರಚನೆಗೊಂಡ ಸಂವಿಧಾನ ರಕ್ಷಣೆಯಾಗಿದೆ ಸಂವಿಧಾನದ 14, 15 ,16,17ನೇ, ವಿಧಿಯ ಆಶಯದಂತೆ ಸಮ ಸಮಾಜವನ್ನು ಕಟ್ಟಬೇಕಾಗಿದೆ. ಬಸವಾದಿ ಶರಣರ ಆಶಯಗಳು ಮತ್ತು ಅಂಬೇಡ್ಕರ್ ರವರ ಸಂವಿಧಾನದ ಆಶಯಗಳು ಎರಡು ಒಂದೇ ಇದ್ದು ನಾವೆಲ್ಲರೂ ಬಲಿಷ್ಠ ಭಾರತವನ್ನ ಕಟ್ಟಲು ಶ್ರಮಿಸಬೇಕು. ಇದಕ್ಕಾಗಿ ಸಂವಿಧಾನದ ರಕ್ಷಣೆ ಅತ್ಯಗತ್ಯವಾಗಿದೆ.ಎಂದು ತಿಳಿಸಿದರು.

ಉಪನ್ಯಾಸಕರಾದ ಡಾ.ಬಸವರಾಜ ಕರಡಿಗುಡ್ಡ ,ಉಪನ್ಯಾಸಕಿ ಶಾರದಮ್ಮ ಮಾತನಾಡಿದರು. ಸಂವಿಧಾನ ದಿನ ಅಂಗವಾಗಿ ವಿದ್ಯಾರ್ಥಿಗಳಿಗೆ ರಸಪ್ರಶ್ನೆ ಕಾರ್ಯಕ್ರಮ ಮತ್ತು ಪ್ರಬಂಧ ಸ್ಪರ್ಧೆ ಏರ್ಪಡಿಸಲಾಗಿತು ಹಾಗೂ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಚಂದ್ರಶೇಖರ್,ಡಾ. ಚನ್ನಬಸವ, ಶೋಭಾ, ಸುಧಾ,ಮುಜೀಬ್, ಶಶಿಧರ್, ಅತಿಥಿ ಉಪನ್ಯಾಸಕರ ಸಂಘದ ತಾಲೂಕ ಅಧ್ಯಕ್ಷ ಶರಣಬಸವ ಮದ್ಲಾಪುರ್, ರಾಜ್ಯಶಾಸ್ತ್ರ ಉಪನ್ಯಾಸಕ ಶರಣಬಸವ ಬೆಟ್ಟದೂರು ಸೇರಿದಂತೆ ವಿವಿಧ ವಿಭಾಗಗಳ ಮುಖ್ಯಸ್ಥರು,ಕಾಲೇಜಿನ ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಇದ್ದರು.

### ರಾಯಚೂರು ಜಿಲ್ಲಾಡಳಿತದಿಂದ ಸಂವಿಧಾನ ದಿನಾಚರಣೆ, ಜಾಥಾ ಶಾಸಕರು, ವಿವಿಧ ಸಂಘಟನೆಗಳ ಪ್ರಮುಖರಿಂದ ಪ್ರತಿಜ್ಞಾವಿಧಿ ಸ್ವೀಕಾರ

## ಸಂವಿಧಾನದಿಂದ ಸಮಾನತೆ, ಸಾಮಾಜಿಕ ನ್ಯಾಯ: ನಿತೀಶ್ ಕೆ

**ರಾಯಚೂರು,ನ.26–** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ಹಾಗೂ ಸಮಾಜ ಕಲ್ಯಾಣ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ನವೆಂಬರ್ 26ರಂದು ಸಂವಿಧಾನ ದಿನಾಚರಣೆ ಕಾರ್ಯಕ್ರಮ ನಡೆಯಿತು.

ಬೆಳಗ್ಗೆ, ನಗರದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಿಂದ ಸಂವಿಧಾನ ಜಾಗೃತಿ ಜಾಥಾ ಆರಂಭವಾಯಿತು. ಇದೆ ಸಂದರ್ಭದಲ್ಲಿ, ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮೀಣ ಶಾಸಕರಾದ ಬಸನಗೌಡ ದದ್ದಲ್, ರಾಯಚೂರು ನಗರ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ತಾಲೂಕಾಧ್ಯಕ್ಷರಾದ ಪವನ ಕಿಶೋರ್ ಪಾಟೀಲ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಈಶ್ವರ ಕಾಂದೂ, ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಕುಮಾರಸ್ವಾಮಿ, ಸಹಾಯಕ ಆಯುಕ್ತರಾದ ಗಜಾನನ ಬಾಳೆ, ತಹಸೀಲ್ದಾರ ಸುರೇಶ ವರ್ಮಾ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಜಿಲ್ಲಾ ಉಪಾಧ್ಯಕ್ಷರಾದ ನಾಗೇಂದ್ರ ಮಠಮಾರಿ ಸೇರಿದಂತೆ ವಿವಿಧ ಸಂಘಟನೆಗಳ ಪ್ರಮುಖರು ಡಾ.ಬಿ.ಆರ್.ಅಂಬೇಡ್ಕರ್ ಪುತ್ಥಳಿಗೆ ಪುಷ್ಪನಮನ ಸಲ್ಲಿಸಿದರು. ಇದೇ ವೇಳೆ, ಸಂವಿಧಾನ ಪೀಠಿಕೆಯನ್ನು ಓದಿದರು. ಬಳಿಕ ಜಾಥಾವು, ಬಸವೇಶ್ವರ ವೃತ್ತ, ಚಂದ್ರಮೌಳೇಶ್ವರ ವೃತ್ತ, ತೀನ್ ಕಂದಿಲ್ ವೃತ್ತ, ತಹಸೀಲ್ದಾರ ಕಚೇರಿ, ಬಸ್ ನಿಲ್ದಾಣ ಸೇರಿದಂತೆ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ನಗರದ ಶ್ರೀ ಪಂಡಿತ್ ಸಿದ್ದರಾಮ ಜಂಬಲದಿನ್ನಿ ಜಿಲ್ಲಾ ರಂಗಮಂದಿರಕ್ಕೆ ಬಂದು ಸೇರಿತು.



ಜಾಥಾದಲ್ಲಿ ಭಾಗಿಯಾಗಿದ್ದ ವಿವಿಧ ಸಂಘಟನೆಗಳು ಪದಾಧಿಕಾರಿಗಳು, ನಾಗರಿಕರು, ಮಹಿಳೆಯರು, ವಿವಿಧ ಶಾಲಾ ಕಾಲೇಜುಗಳ ಮತ್ತು ವಸತಿ ನಿಲಯಗಳ ವಿದ್ಯಾರ್ಥಿಗಳು ಸಂವಿಧಾನ ಜಾಗೃತಿಯ ಫಲಕ, ಸಂವಿಧಾನ ಪುಸ್ತಕ, ರಾಷ್ಟ್ರಧ್ವಜ ಹಿಡಿದು ಸಾಲಾಗಿ ಜಾಥಾದ ಮೆರುಗು ಹೆಚ್ಚಿಸಿದರು.

ಬಳಿಕ, ಜಿಲ್ಲಾ ರಂಗಮಂದಿರದಲ್ಲಿ ನಡೆದ ವೇದಿಕೆಯ ಕಾರ್ಯಕ್ರಮವನ್ನು ಜಿಲ್ಲಾಧಿಕಾರಿ ನಿತೀಶ್ ಕೆ ಅವರು ಉದ್ಘಾಟಿಸಿ ಮಾತನಾಡಿ, ನ್ಯಾಯ ಮತ್ತು ಸಮಾನತೆಯ ಆಶಯ ಹೊಂದಿದ್ದ ಡಾ.ಬಿ.ಆರ್.ಅಂಬೇಡ್ಕರ್ ಅವರು ಸರ್ವರಿಗು (2ನೇ ಪುಟಕ್ಕೆ)

## ಮಗುವಿನ ದತ್ತು ಪ್ರಕ್ರಿಯೆ ಕಾನೂನಾತ್ಮಕವಾಗಿರಲು ಜಾಗೃತಿ ವಹಿಸಿ: ಡಾ ಗಣೇಶ್ ಕೆ ಸಲಹೆ



**ರಾಯಚೂರು,ನ.26–** ಜನ್ಮವೆತ್ತುವ ಪ್ರತಿಯೊಂದು ಮಗುವಿನ ಜೀವನದ ಭವಿಷ್ಯಕ್ಕೆ ಪ್ರತಿಯೊಬ್ಬರೂ ಕೈಜೋಡಿಸಬೇಕಿದ್ದು, ಅದರಲ್ಲೂ ಅನಾಥ, ನಿರ್ಗತಿಕ ಹಾಗೂ ಪರಿತ್ಯಕ್ತ ಮಕ್ಕಳಿಗೂ ಕೂಡ ಪ್ರೀತಿ, ವಾತ್ಸಲ್ಯ, ಮಮತೆ ಹಾಗೂ ಬಾಂಧವ್ಯವನ್ನು ಕಾನೂನಾತ್ಮಕವಾಗಿ ದತ್ತು ತೆಗೆದುಕೊಳ್ಳುವ ಕುರಿತು ಮಾಹಿತಿ ನೀಡಬೇಕು ಎಂದು ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ ಗಣೇಶ್ ಕೆ ಅವರು ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ಮಕ್ಕಳ ರಕ್ಷಣಾ ಘಟಕ ರವರ ಸಹಯೋಗದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕೃಷ್ಣಾ ಸಭಾಂಗಣದಲ್ಲಿ ದತ್ತು ಮಾಸಾಚರಣೆ ಪ್ರಯುಕ್ತ ವೈದ್ಯಾಧಿಕಾರಿಗಳು ಹಾಗೂ ಸಿಬ್ಬಂದಿಯವರಿಗೆ ನವೆಂಬರ್ 26ರಂದು ಜರುಗಿದ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿ, ಪ್ರಸ್ತುತ ವರ್ಷ ವಿಶೇಷ ಅಗತ್ಯತೆಯುಳ್ಳ ಮಕ್ಕಳನ್ನು ಸಹ ದತ್ತು ತೆಗೆದುಕೊಂಡು ಹೊಸ ಬದುಕಿಗೆ ಅವಕಾಶ ಮಾಡಿಕೊಡಲು ಜನತೆಯು ಮುಂದೆ ಬರಲು ಜನಜಾಗೃತಿ ನೀಡಬೇಕು ಎಂದು ತಿಳಿಸಿದರು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ರಕ್ಷಣಾಧಿಕಾರಿ ಕಿರಲಿಂಗಪ್ಪ ಮಾತನಾಡಿ, ಯಾವುದೋ ಕಾರಣ, ಸಂದಿಗ್ಧ ಸನ್ನಿವೇಶಗಳಿಂದ ಕಂದಮ್ಮಗಳನ್ನು ಬೀದಿ, ತಿಪ್ಪೆ, ಕಾಲುವೆ ಬದಿ ಬಿಟ್ಟುಹೋಗುವ ಹಲವಾರ ಉದಾಹರಣೆಗಳಿವೆ. ಇಂತ ಸಂದರ್ಭದಲ್ಲಿ 1098ಗೆ ಕರೆಮಾಡಿ ಮಕ್ಕಳ ರಕ್ಷಣಾ ಘಟಕಕ್ಕೆ ಮಾಹಿತಿ ನೀಡಿ ಮಗುವನ್ನು ಒಪ್ಪಿಸಿದಲ್ಲಿ ಮಕ್ಕಳನ್ನು ಸಾಕುವ ಅದೆಷ್ಟೊ ಪಾಲಕರಿಗೆ "ಮಕ್ಕಳ ಪೋಷಣೆ ಮತ್ತು ರಕ್ಷಣೆ ಕಾಯ್ದೆ-2015" ರಡಿ ಕೇಂದ್ರ ದತ್ತು ಸಂಪನ್ಮೂಲ ಪ್ರಾಧಿಕಾರದ ಮಾರ್ಗಸೂಚಿಯನ್ವಯ ದತ್ತು ನೀಡಲಾಗುತ್ತಿದ್ದು, ದಯವಿಟ್ಟು ಯಾರು ನವಜಾತ ಶಿಶು ಹಾಗೂ ಮಕ್ಕಳನ್ನು ಸಹ ಅನಾಥವಾಗಿಸಬೇಡಿ ಎಂದು ಎಲ್ಲರೂ ಸೇರಿ ಜಾಗೃತಿ ನೀಡೋಣ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ

## ಪ್ರಜಾಪ್ರಭುತ್ವ ದೇಶಕ್ಕೆ ಶ್ರೇಷ್ಠವಾದ ಸಂವಿಧಾನ ನೀಡಿದವರು ಡಾ.ಬಿ.ಆರ್. ಅಂಬೇಡ್ಕರ್ : ಶಿವರಾಜ್.ವಿ.ಸಿದ್ದೇಶ್ವರ್

**ಮಾನ್ವಿ,ನ.26–** ವಿಶ್ವದ ಅತಿದೊಡ್ಡ ಪ್ರಜಾಪ್ರಭುತ್ವ ದೇಶಕ್ಕೆ ಡಾ.ಬಿ.ಆರ್. ಅಂಬೇಡ್ಕರ್ ಅವರು1949,ನ.26 ರಂದು ವಿಶ್ವದ ಅತ್ಯಂತ ಶ್ರೇಷ್ಟವಾದ ,ಸಮಾನತೆಯ ಸಂವಿಧಾನವನ್ನು ಭಾರತ ದೇಶಕ್ಕೆ ನೀಡಿದ ದಿನವನ್ನು ಪ್ರತಿ ವರ್ಷ ನ.26 ರಂದು ಸಂವಿಧಾನ ದಿನವನ್ನಾಗಿ ಆಚರಿಸಲಾಗುತ್ತದೆ ಎಂದು ಹಿರಿಯ ನ್ಯಾಯಾಧೀಶರಾದ ಶಿವರಾಜ್. ವಿ.ಸಿದ್ದೇಶ್ವರ ತಿಳಿಸಿದರು.

ಪಟ್ಟಣದ ಸಿವಿಲ್ ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯದ ಆವರಣದಲ್ಲಿ ತಾಲೂಕ ಕಾನೂನು ಸೇವಾಸಮಿತಿ , ತಾಲೂಕು ನ್ಯಾಯವಾದಿಗಳ ಸಂಘ ಹಾಗೂ ತಾಲೂಕಿನ ವಿವಿಧ ಅಧಿಕಾರಿಗಳ ಸಂಯುಕ್ತಾಶ್ರಯದಲ್ಲಿ ನಡೆದ ಸಂವಿಧಾನ ದಿನ ಕಾರ್ಯಕ್ರಮವನ್ನು ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ರವರ ಭಾವಚಿತ್ರಕ್ಕೆ ಪುಷ್ಪ ಸಮರ್ಪಿಸುವ ಮೂಲಕ ಆಚರಿಸಿ ಮಾತನಾಡಿ ನ.26 ಅನ್ನು ಮೊದಲು ಕಾನೂನು ದಿನವಾಗಿ ಆಚರಿಸಲಾಗುತ್ತಿತ್ತು ನಂತರ ನ.2015 ರಿಂದ ಡಾ.ಬಿ.ಆರ್. ಅಂಬೇಡ್ಕರ ರವರ ಸವಿನೆನಪಿಗಾಗಿ ಸಂವಿಧಾನ ಸಮರ್ಪಣ ದಿನವನ್ನಾಗಿ ಆಚರಿಸಲಾಗುತ್ತಿದೆ ಸಂವಿಧಾನದ ಪ್ರಸ್ತವನೆಯಲ್ಲಿ ತಿಳಿಸಿರುವಂತೆ ಸಂವಿಧಾನದ ಮೌಲ್ಯಗಳನ್ನು,



ಆಶಾಯಗಳನ್ನು ನಾವೇಲ್ಲರು ಎತ್ತಿ ಹಿಡಿಯಬೇಕಾಗಿದೆ. ನಮ್ಮ ಸಂವಿಧಾನದಲ್ಲಿನ ಅರ್ಟಿಕಲ್ 32 ಸಂವಿಧಾನದ ಹೃದಯವಾಗಿದೆ ಈ ಕಾಯ್ದೆಯಡಿಯಲ್ಲಿ ದೇಶದ ಪ್ರತಿಯೊಬ್ಬ ನಾಗರಿಕರಿಗೂ ಕೂಡ ತಮ್ಮ ಮೂಲಭೂತ ಹಕ್ಕುಗಳಿಗೆ ತೊಂದರೆಯಾದಲ್ಲಿ ದೇಶದ ಸರ್ವೋಚ್ಚ ನ್ಯಾಯಾಲಯವಾದ ಸುಪ್ರಿಂಕೋರ್ಟಗೆ ನೇರವಾಗಿ ಮೊರೆಹೋಗುವುದಕ್ಕೆ ಅವಕಾಶ ನೀಡುತ್ತದೆ ಅದ್ದರಿಂದ ಪ್ರತಿಯೊಬ್ಬರು ಕೂಡ ಸಂವಿಧಾನಕ್ಕೆ ಗೌರವ ನೀಡಬೇಕು ಹಾಗೂ ಪಾಲಿಸಬೇಕು ಎಂದು ತಿಳಿಸಿದರು.

ಕಿರಿಯ ನ್ಯಾಯಾಧೀಶರಾದ ಆನಂದ್ ಹೆಚ್,ಕಣ್ಣೂರು ಮಾತನಾಡಿದರು.

ತಾಲೂಕು ವಕೀಲರ ಸಂಘದ ಅಧ್ಯಕ್ಷರಾದ ರವಿಕುಮಾರಪಾಟೀಲ್, ಉಪಾಧ್ಯಕ್ಷರಾದ ಶಿವಪ್ಪ ಸುಂಕನೂರು,ವಿಶ್ವನಾಥರಾಯಪ್ಪ, ಪ್ರ.ಕಾರ್ಯದರ್ಶಿ ಯಲ್ಲಪ್ಪ ಬಾದರದಿನ್ನಿ, ಜಂಟಿ ಕಾರ್ಯದರ್ಶಿ ನಾಗರಾಜ ಗೂಗಲ್, ಖಜಾಂಚಿ ಸ್ಟೇಲಾ ಶಾರ್ಲಾಟ್, ಜಂಟಿ ಕಾರ್ಯದರ್ಶಿ ಚಂದ್ರಕಲಾ, ಹಿರಿಯ ನ್ಯಾಯವಾದಿಗಳಾದ ಗುಮ್ಮ ಬಸವರಾಜ, ಮನೋಹರ ವಿಶ್ವಕರ್ಮ, ರಾಜಾ ಶ್ಯಾಮಸುಂದರ್ ನಾಯಕ,ವೀರನಗೌಡ ಪೋತ್ನಾಳ್, ಕೋರವಯ್ಯನಾಯಕ,ಶಿವರಾಜನಾಯಕ, ಚನ್ನಬಸವನಾಯಕ,ಸೇರಿದಂತೆ ನ್ಯಾಯಲಯದಲ್ಲಿನ ವಕೀಲರು ಭಾಗವಹಿಸಿದರು

# ವಾರಸುದಾರರಿಲ್ಲದ ಬ್ಯಾಂಕ್ ಠೇವಣಿ ಕಾನೂನು ಬದ್ಧ ಹಸ್ತಾಂತರಕ್ಕೆ ವಿಶೇಷ ಶಿಬಿರ ನವೆಂಬರ್ 28ಕ್ಕೆ

**ರಾಯಚೂರು,ನ.26–** ದೀರ್ಘಕಾಲದವರೆಗೆ ಹಕ್ಕು ಪಡೆಯದೆ ಉಳಿದಿರುವ ಬ್ಯಾಂಕ್ ಠೇವಣಿಗಳು, ವಿಮಾ ಕಂತುಗಳು ಮತ್ತು ಷೇರುಗಳನ್ನು ಅವುಗಳ ಮಾಲಿಕರು ಅಥವಾ ಕಾನೂನು ಬದ್ದ ವಾರಸುದಾರರಿಗೆ ಹಸ್ತಾಂತರಿಸುವ ಶಿಬಿರವನ್ನು ನವೆಂಬರ್ 28 ರಂದು ಮಧ್ಯಾಹ್ನ 11ಕ್ಕೆ ಜಿಲ್ಲಾ ಪಂಚಾಯತ್ ಕಚೇರಿ ಸಭಾ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಈಶ್ವರ ಕಾಂದೂ, ಲೀಡ್ ಬ್ಯಾಂಕ್ ಮ್ಯಾನೇಜರ್ ಪಾಂಡಪ್ಪ ಆರ್.ಬಿ., ಮ್ಯಾನೇಜರ್ ಶ್ರೀ ಪ್ರಭಾಕರನ್ ಉಪಸ್ಥಿತರಿರುವರು.

ಈ ಶಿಬಿರವು ಭಾರತದ ಹಣಕಾಸು ಸಚಿವಾಲಯದ ಮಾರ್ಗಸೂಚಿಗಳ ಪ್ರಕಾರ ಎಲ್ಲಾ ಬ್ಯಾಂಕಿಂಗ್, ವಿಮೆ ಮತ್ತು ಇತರ ವಲಯಕ್ಕೆ ಸಂಬಂಧಿಸಿದ ಕಚೇರಿ ಶಾಖೆಗಳಲ್ಲಿ ಡಿಸೆಂಬರ್ 31ರವರೆಗೆ ಮುಂದುವರೆಯುತ್ತದೆ. ಖಾತೆದಾರರು ಅಥವಾ ಕಾನೂನು ಬದ್ಧ ವಾರಸುದಾರರು ಬ್ಯಾಂಕಿನಲ್ಲಿ ಸತತ 10 ವರ್ಷಗಳಿಗೂ ಹೆಚ್ಚು ಕಾಲ ನಿಷ್ಕ್ರಿಯವಾಗಿರುವ ಖಾತೆಗಳಲ್ಲಿನ ಹಣ ಮತ್ತು ಕ್ಲೇಮ್ ಮಾಡದ ಠೇವಣಿಗಳನ್ನು ಕ್ಲೇಮ್ ಮಾಡಬಹುದು. ಬ್ಯಾಂಕಿಂಗ್ ವಲಯ, ವಿಮಾ ವಲಯ, ಹಣಕಾಸು ವಲಯ ಮತ್ತು ಇತರ ವಲಯಗಳ ಅಧಿಕಾರಿಗಳು ಶಿಬಿರದಲ್ಲಿ ಭಾಗವಹಿಸಿ ಸಲಹೆ ನೀಡಲಿದ್ದಾರೆ. ಬ್ಯಾಂಕಿನಲ್ಲಿ 10 ವರ್ಷಗಳಿಗೂ ಹೆಚ್ಚು ಕಾಲ ನಿಷ್ಕ್ರಿಯವಾಗಿರುವ ಮತ್ತು ಕ್ಲೇಮ್ ಮಾಡದ ಖಾತೆಗಳು ಮತ್ತು ಠೇವಣಿಗಳ ವಿವರಗಳನ್ನು ǃಣಣಠಿ?://ಣಜರಚಿಟ.ಡಿ�abಡಿ.oಡಿg.iಟಿ ನಲ್ಲಿ ಕಾಣಬಹುದು.

ಸೂಕ್ತ ಗುರುತಿನ ದಾಖಲೆಗಳು ಮತ್ತು ಪುರಾವೆಗಳೊಂದಿಗೆ ಶಿಬಿರದಲ್ಲಿ ಭಾಗವಹಿಸುವ ಮೂಲಕ ಅಗತ್ಯ ಸಲಹೆಯನ್ನು ಪಡೆಯಬಹುದು ಮತ್ತು ಹಕ್ಕು ಪಡೆಯದ ಮೊತ್ತವನ್ನು ಮರುಪಡೆಯಲು ಈ ಶಿಬಿರವನ್ನು ಬಳಸಿಕೊಳ್ಳಬಹುದು ಎಂದು ಲೀಡ್ ಬ್ಯಾಂಕ್ ಪ್ರಕಟಣೆ ತಿಳಿಸಿದೆ.

# ಗಣೇಶ ದೇವಸ್ಥಾನದಲ್ಲಿ ಕಾರ್ತಿಕ ದೀಪೋತ್ಸವ



**ಕವಿತಾಳ,ನ.26–ಪಟ್ಟಣದ ಗಣೇಶ ದೇವಸ್ಥಾನದಲ್ಲಿ ಕಾರ್ತಿಕ ಮಾಸದ ಅಂಗವಾಗಿ ಇಂದು ಸಂಜೆ ದೀಪೋತ್ಸವವನ್ನು ಸಂಭ್ರಮದಿಂದ ಆಚರಿಸಲಾಯಿತು. ದೀಪೋತ್ಸವ ಪ್ರಯುಕ್ತ ಗಣೇಶ ಮೂರ್ತಿಗೆ ಪಂಚಾಮೃತ ಅಭಿಷೇಕ, ಸಹಸ್ರ ಬಿಲ್ವಾರ್ಚನೆ, ಮಹಾಮಂಗಳಾರತಿ ಸೇರಿದಂತೆ ವಿವಿಧ ಪೂಜಾ ವಿಧಿವಿದಾನಗಳನ್ನು ನೆರವೇರಿಸಲಾಯಿತು.ಪುರುಷರಾದಿಯಾಗಿ, ಮಹಿಳೆಯರು ಮತ್ತು ಮಕ್ಕಳು ದೀಪ ಹಚ್ಚುವ ಮೂಲಕ ತಮ್ಮ ಭಕ್ತಿಸೇವೆಯನ್ನು ಸಲ್ಲಿಸಿದರು.**

**ಬಸಮ್ಮ ಅಮೀನಗಡ, ನೀಲಮ್ಮ ಅಮೀನಗಡ, ಮಾಧವಿ ಬಳ್ಳಾಖುಇ, ಸುಜಾತ,ಲತಾ, ಕವಿತಾ ಹಿರೇಮಠ, ಭಾರತಿ, ಬಸಮ್ಮ ಸಜ್ಜನ್,ಶಂಕ್ರಣ್ಣ, ಸಂಗಮೇಶ ಸಾಲಿಮನಿ, ದೇವರಾಜ್, ತಾಯಣ್ಣಸ್ವಾಮಿ, ಸೇರಿದಂತೆ ಇನ್ನಿತರ ಭಕ್ತರು ಇದ್ದರು.**

# ಕಳಪೆ ಗುಣಮಟ್ಟದ ಕಸದ ಬುಟ್ಟಿಗಳ ಪೂರೈಕೆ ದಾರರ ಮೇಲೆ ಕ್ರಮಕ್ಕೆ ಮನವಿ

**ಮಾನ್ವಿ,ನ.26–** ಪಟ್ಟಣದ ತಹಸೀಲ್ದಾರ್ ಕಚೇರಿಯಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ಜನಪರ ಬಣ ತಾ,ಘಟಕ ವತಿಯಿಂದ ಜಿಲ್ಲಾಧಿ ಕಾರಿಗಳಿಗೆ ಗ್ರೇಡ್–2 ತಹಸೀಲ್ದಾರ್ ಅಬ್ದುಲ್ ವಾಹಿದ್ ರವರ ಮೂಲಕ ಮನವಿ ಸಲ್ಲಿಸಿ ಜಿಲ್ಲಾಧ್ಯಕ್ಷರಾದ ರಂಗರಾವ್ ಕುಲಕರ್ಣಿ ಮಾತ ನಾಡಿ ಪಟ್ಟಣದ ಪುರಸಭೆ ವತಿಯಿಂದ ಪಟ್ಟಣದ ವಿವಿಧ ವಾರ್ಡ ಗಳಲ್ಲಿ ಸಾರ್ವಜನಿಕರಿಗೆ ಕಸವನ್ನು ಸಂಗ್ರಹಿಸುವುದಕ್ಕೆ ನೀಡುವುದಕ್ಕೆಂದು ಅಂದಾಜು 21ಸಾವಿರದ ನಾಲ್ಕನೂರ ಐವತ್ತು ಡಸ್ಟ್ ಬಿನ್ ಗಳನ್ನು 32 ಲಕ್ಷ ವೆಚ್ಚದಲ್ಲಿ ಖರೀದಿ ಮಾಡಬೇಕಾಗಿ ರುವ ಡಸ್ಟ್ ಬಿನ್‌ಗಳನ್ನು ಕಡಿಮೆ ಪ್ರಮಾಣದಲ್ಲಿ ಅತ್ಯಂತ ಕಳಪೆ ಗುಣಮಟ್ಟದಿಂದ ಕೂಡಿರುವ ಡಸ್ಟ್ ಬಿನ್ ಗಳನ್ನು ಹೆಚ್ಚಿನ ಮೊತ್ತಕ್ಕೆ ಖರೀದಿ ಮಾಡಿರುವುದಾಗಿ ತಿಳಿದುವರುತ್ತದೆ 10 ಲೀ ಸಾಮಾರ್ಥ್ಯದ ಡಸ್ಟ್ ಬಿನ್‌ಗಳು ಸಾರ್ವ ಜನಿಕರ ಬಳಕೆಗೆ ಯೋಗ್ಯವಾಗಿಲ್ಲ ಅದ್ದರಿಂದ ಡಸ್ಟ್ ಬಿನ್ ಗಳನ್ನುಪೂರೈಕ್ಕೆ ಮಾಡಿದ ಗುತ್ತಿದಾರರ ಮೇಲೆ ಸೂಕ್ತವಾದ ಕ್ರಮ ಕೈಗೊಳ್ಳಬೇಕು ಹಾಗೂ



ಪುರಸಭೆವತಿಯಿಂದ ಸಾರ್ವಜನಿಕರಿಗೆ ಡಸ್ಟ್ ಬಿನ್ ವಿತರಣೆ ಮಾಡಿರುವ ಕುರಿತು ಸೂಕ್ತವಾದ ದಾಖಲಾತಿಯುನ್ನು ನಿರ್ವಹಿಸಬೇಕು ಎಂದು ಒತ್ತಾಯಿಸಿದರು.

ರಾಜ್ಯ ಉಪಾಧ್ಯಕ್ಷರಾದ ಇರ್ಫಾನ್ ಧಣಿ, ರಾಮಣ್ಣನಾಯಕ, ಕೃಷ್ಣದಾನಿ, ಉಸ್ಮಾನ್ ಸಾಬ್,ಯಲ್ಲಪ್ಪನಾಯಕ, ರಾಘವೇಂದ್ರ ನಾಯಕ, ವಿಶ್ವನಾಥ ಪವಾರ್, ಅಮರೇಶ ಪಾಟೀಲ್, ಗಂಗಾಧರ ಪವಾರ್,ಬಾಬಾ ಸಾಬು ಸೇರಿದಂತೆ ಇನ್ನಿತರರು ಇದ್ದರು.

# ವಿವಾದಿತ ಕಾಯ್ದೆಗಳ ರದ್ದು ಮತ್ತು 4% ಮುಸ್ಲಿಂ ಮೀಸಲಾತಿ ಮರುಸ್ಥಾಪನೆಗೆ ಆಗ್ರಹ: ಸಿಎಂಗೆ ಮನವಿ

**ಮಾನ್ವಿ, ನ. 26–** ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ಜಾರಿಗೆ ತಂದಿದ್ದ ವಿವಾದಿತ ಕರ್ನಾಟಕ ಜಾನುವಾರು ಸಂರಕ್ಷಣಾ ಕಾಯ್ದೆ ಮತ್ತು ಮತಾಂತರ ನಿಷೇಧ ಕಾಯ್ದೆಯನ್ನು ರದ್ದುಗೊಳಿ ಸಬೇಕು ಹಾಗೂ ರದ್ದುಪಡಿಸಲಾದ 4% ಮುಸ್ಲಿಂ ಮೀಸಲಾತಿ ಯನ್ನು ತಕ್ಷಣವೇ ಮರುಸ್ಥಾಪಿಸಬೇಕೆಂದು ಆಗ್ರಹಿಸಿ ವೆಲ್ ಫೇರ್ ಪಾರ್ಟಿ ಆಫ್ ಇಂಡಿಯಾ ವತಿಯಿಂದ ತಹಸೀಲ್ದಾರ್ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಮನವಿ ಸಲ್ಲಿಸಲಾಯಿತು.

ಮುಂಬರುವ ಬೆಳಗಾವಿ ಚಳಿಗಾಲದ ಅಧಿವೇಶನದಲ್ಲಿ ಈ ಬಗ್ಗೆ ನಿರ್ಣಯ ಕೈಗೊಳ್ಳುವಂತೆ ಒತ್ತಾಯಿಸಿ, ಸಂಘಟನೆಯ ಪ್ರಮುಖರು ಮುಖ್ಯಮಂತ್ರಿಗಳಿಗೆ ಬರೆದ ಜ್ಞಾಪನ ಪತ್ರದ ಮೂಲಕ ಸರ್ಕಾರವನ್ನು ಆಗ್ರಹಿಸಿದ್ದಾರೆ. ಕರ್ನಾಟಕ ಜಾನುವಾರು ಸಂರಕ್ಷಣಾ ಕಾಯ್ದೆ, 2021 ರಾಜ್ಯದಲ್ಲಿ ಭಯದ ವಾತಾವರಣವನ್ನು ಸೃಷ್ಟಿಸಿದೆ. ಈ ಕಾಯ್ದೆಯ ನೆಪದಲ್ಲಿ ಗೋ ಸಾಗಾಣಿಕೆದಾರರ ಮೇಲೆ ಹಲ್ಲೆ, ಶೂಟೌಟ್ ಮತ್ತು ಆಸ್ತಿ ಜಪ್ತಿಯಂತಹ ಘಟನೆಗಳು ನಡೆಯುತ್ತಿವೆ. ಅಲ್ಲದೆ, ರೈತರು ತಾವು ಸಾಕಿದ ಜಾನುವಾರುಗಳನ್ನು ಮಾರಾಟ ಮಾಡಲು ಸಾಧ್ಯವಾಗದೆ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಮನವಿಯಲ್ಲಿ ವಿವರಿಸಲಾಗಿದೆ.

ಧರ್ಮ ಸ್ವಾತಂತ್ರ ಸಂರಕ್ಷಣಾ ಕಾಯ್ದೆ (ಮತಾಂತರ ನಿಷೇಧ ಕಾಯ್ದೆ) ಭಾರತದ ಸಂವಿಧಾನಕ್ಕೆ ವಿರುದ್ಧವಾಗಿದ್ದು, ಇದು ಅಲ್ಪಸಂಖ್ಯಾತರ ಮೇಲಿನ ದೌರ್ಜನ್ಯಕ್ಕೆ ಕಾರಣವಾಗಿದೆ. ಪ್ರತಿಯೊ ಬ್ಬರಿಗೂ ತಮ್ಮಿಷ್ಟದ ಧರ್ಮವನ್ನು ಪಾಲಿಸುವ ಹಕ್ಕನ್ನು ಸಂವಿಧಾನ ನೀಡಿದ್ದರೂ, ಈ ಕಾಯ್ದೆಯು ವ್ಯಕ್ತಿ ಸ್ವಾತಂತ್ರ್ಯವನ್ನು ಹತ್ತಿಕ್ಕುತ್ತಿದೆ ಎಂದು ದೂರಲಾಗಿದೆ.

**ಚುನಾವನಾ ಭರವಸೆ ಈಡೇರಿಸಲು ಒತ್ತಾಯ:**2023ರ ವಿಧಾನಸಭಾ ಚುನಾವಣಾ ಪ್ರಣಾಳಿಕೆಯಲ್ಲಿ ಕಾಂಗ್ರೆಸ್ ಪಕ್ಷವು ಅಧಿಕಾರಕ್ಕೆ



ಬಂದ ಒಂದು ವರ್ಷದೊಳಗೆ ಈ ಜನವಿರೋಧಿ ಕಾಯ್ದೆಗಳನ್ನು ಹಿಂಪಡೆಯುವುದಾಗಿ ಭರವಸೆ ನೀಡಿತ್ತು. ಇದೀಗ ಸರ್ಕಾರವು ತನ್ನ ಮಾತನ್ನು ಉಳಿಸಿಕೊಳ್ಳುವ ಮೂಲಕ ಅಲ್ಪಸಂಖ್ಯಾತರಿಗೆ ಮತ್ತು ರೈತರಿಗೆ ನ್ಯಾಯ ಒದಗಿಸಬೇಕೆಂದು ಮುಖಂಡರು ಒತ್ತಾಯಿಸಿದ್ದಾರೆ. ಜೊತೆಗೆ, ಶಿಕ್ಷಣ ಮತ್ತು ಉದ್ಯೋಗದಲ್ಲಿ ಸಾ ಮಾಜಿಕ ನ್ಯಾಯವನ್ನು ಎತ್ತಿಹಿಡಿಯಲು, ಹಿಂದೆ ರದ್ದುಪಡಿಸ ಲಾಗಿದ್ದ 4% ಮುಸ್ಲಿಂ ಮೀಸಲಾತಿಯನ್ನು ಮರುಸ್ಥಾಪಿಸಬೇಕೆಂದು ಇದೇ ವೇಳೆ ಆಗ್ರಹಿಸಲಾಯಿತು.

ಈ ಸಂದರ್ಭದಲ್ಲಿ ತಾಲೂಕು ಅಧ್ಯಕ್ಷ ಶೇಕ್ ಬಾಬಾ ಹುಸೇನ್, ಜಿಲ್ಲಾ ಸಂಘಟನಾ ಕಾರ್ಯದರ್ಶಿ ಎಂ.ಎ.ಎಚ್ ಮುಕೀಮ್, ತಾಲೂಕು ಕಾರ್ಯದರ್ಶಿ ನಾಸಿರ್ ಅಲಿ, ಮುಖಂಡರಾದ ಮಿರ್ಜಾ ಬಾಬಾ ಬೇಗ, ಶೇಕ್ ಮಹಬೂಬ್, ಅಹಮದ್ ಹುಸೇನ್, ರಬ್ಬಾನಿ ಖುರೇಶಿ, ಮಹಮ್ಮದ್ ಹರುನ್, ಅಬ್ದುಲ್ ಸಮದ್, ಸಿರಾಜ್ ಪಾಷಾ, ಆಲಮ್ ಸಾಬ್, ಸೈಯದ್ ನಾಸಿರ್ ಉದ್ದಿನ್ ಖಾಜಿ, ರೋಹಿತ್ ಪಾಷಾ ಮುಂತಾದವರು ಉಪಸ್ಥಿತರಿದ್ದರು.

## ಮೊದಲನೇಯ ಪುಟದಿಂದ

# ಮನುವಾದಿಗಳು, ಸಂವಿಧಾನ ವಿರೋಧಿಗಳು

ಶಿಲ್ಪಿ ಎನ್ನುವುದನ್ನು ಮರೆಯಬಾರದು. ಎಂದರು ಈ ದೇಶದ ಜಾತಿ ವ್ಯವಸ್ಥೆ ಮತ್ತು ಅಪಾಯಗಳು ಅಂಬೇಡ್ಕರ್ ಅವರಿಗೆ ಅರ್ಥ ಆಗಿತ್ತು. ಅದಕ್ಕೇ ನಮ್ಮ ಸಂವಿಧಾನದಲ್ಲಿ ಮೀಸಲಾತಿಯನ್ನು ಸೇರಿಸಿದರು

ಸ್ವಾತಂತ್ರ್ಯ, ಸಮಾನತೆ, ಬ್ರಾತೃತ್ವ ಸಂವಿಧಾನದ ಆಶಯ. ಆದರೆ ಸ್ವಾತಂತ್ರ್ಯ ಬಂದು ಇಷ್ಟು ವರ್ಷ ಆದರೂ ಸಂವಿಧಾನದ ಆಶಯ ಈಡೇರಿಲ್ಲ ಎಂದು ವಿಷಾದಿಸಿದರು

ಬಸವಣ್ಣನವರಾದಿಯಾಗಿ ಎಲ್ಲಾ ಮಹಾತ್ಮರೂ ಜಾತಿ ವ್ಯವಸ್ಥೆ ವಿರುದ್ಧ ಹೋರಾಡಿದರೂ ಪಟ್ಟ ಭದ್ರರು ಜಾತಿ ಹೋಗಲು ಬಿಡುತ್ತಿಲ್ಲ ಎಂದರು.

ಕೆಳ ಜಾತಿಯ ಶೂದ್ರ ವರ್ಗದವರಿಗೆ ಆರ್ಥಿಕ ಶಕ್ತಿ ಬಂದಾಗ ಮಾತ್ರ ಜಾತಿ ದುರ್ಬಲವಾಗುತ್ತದೆಸಂವಿಧಾನ ಸಭೆಯಲ್ಲಿ ಅಂಬೇಡ್ಕರ್ ಮಾಡಿದ ಕೊನೆಯ ಭಾಷಣವನ್ನು, ಈ ಭಾಷಣದ ಎಚ್ಚರಿಕೆಯ ಮಾತುಗಳನ್ನು ಪ್ರತಿಯೊಬ್ಬರೂ ಮನವರಿಕೆ ಮಾಡಿಕೊಳ್ಳಬೇಕು*ಅಸಮಾನತೆ ಇರುವ ದೇಶದಲ್ಲಿ ಸಮಾನತೆ ಸುಲಭವಾಗಿ ಬರುವುದಿಲ್ಲ ಎಂದು ಹೇಳಿದರು

ದಲಿತರನ್ನು, ಶೂದ್ರರನ್ನು ಹಿಂದುಳಿದವರನ್ನು, ಮುಸ್ಲೀಮರನ್ನು, ಅಲ್ಪಸಂಖ್ಯಾತರನ್ನು ದ್ವೇಷಿಸಿ ಎಂದು ನಮ್ಮ ಧರ್ಮವೂ ಹೇಳುವುದಿಲ್ಲ. ಯಾವ ಧರ್ಮವೂ ಹೇಳುವುದಿಲ್ಲ.ಸಂವಿಧಾನ ಅಂಗೀಕಾರಕ್ಕೆ 285 ಮಂದಿ ಸದಸ್ಯರಲ್ಲಿ 284 ಮಂದಿ ಪೂರ್ತಿ ಸಹಿ ಹಾಕಿದರು. ಒಬ್ಬರು ಮಾತ್ರ ಹಾಕಲಿಲ್ಲ. ಹೀಗಾಗಿ ಬಹುತೇಕ ಎಲ್ಲರಿಗೂ ಒಪ್ಪಿಗೆ ಆಗುವಂತಹಾ ಸಂವಿಧಾನವನ್ನು ಅಂಬೇಡ್ಕರ್ ರಚಿಸಿದರು ಎಂದರು

ಸಂವಿಧಾನದ ಸಮಾನತೆಯ ಆಶಯವನ್ನು ಈಡೇರಿಸುವ ಸಲುವಾಗಿಯೇ ನಾನು ಮೊದಲ ಬಾರಿ ಮುಖ್ಯಮಂತ್ರಿಯಾಗಿ ಹಲವು ಭಾಗ್ಯಗಳನ್ನು ಜನರ ಮನೆ ಬಾಗಿಲಿಗೆ ತಲುಪಿಸಿದೆತುತ್ತು ಅನ್ನಕ್ಕಾಗಿ ಯಾರೂ ಯಾರ ಮನೆ ಮುಂದೆಯೂ ನಿಲ್ಲಬಾರದು ಎನ್ನುವ ಆಶಯದಿಂದ ಅನ್ನಭಾಗ್ಯ ತಂದೆ, ಯಾರ ಮನೆ ಮಕ್ಕಳೂ ಬರಿಗಾಗಲ್ಲಿ ಶಾಲೆಗೆ ಹೋಗಬಾರದು ಎನ್ನುವ ಕಾರಣದಿಂದ ಶೂ ಭಾಗ್ಯ ತಂದೆ. ಎಲ್ಲಾ ಭಾಗ್ಯಗಳ ಹಿಂದೆ ಹಾಗೂ ಈಗ ಜಾರಿ ಮಾಡಿರುವ ಐದೂ ಗ್ಯಾರಂಟಿಗಳ ಹಿಂದೆ ಅಸಮಾನತೆ ನಿವಾರಿಸುವ ಮತ್ತು ಸರ್ವರಿಗೂ ಆರ್ಥಿಕ ಶಕ್ತಿ ಬರಲಿ ಎನ್ನುವ ಆಶಯ ಇದೆ ಎಂದರು.

ಸಚಿವರಾದ ಹೆಚ್.ಸಿ.ಮಹದೇವಪ್ಪ, ಕೆ.ಹೆಚ್.ಮುನಿಯಪ್ಪ, ಎಂ.ಸಿ.ಸುಧಾಕರ್, ಕಾನೂನು ಸಲಹೆಗಾರರಾದ ಎ.ಎಸ್.ಪೊನ್ನಣ್ಣ, ರಾಜಕೀಯ ಕಾರ್ಯದರ್ಶಿ ನಸೀರ್ ಅಹ್ಮದ್ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

# ಸಂವಿಧಾನದಿಂದ ಸಮಾನತೆ, ಸಾಮಾಜಿಕ ನ್ಯಾಯ: ನಿತೀಶ್ ಕೆ

ಸಮಬಾಳು ಎನ್ನುವ ಸಾಮಾಜಿಕ ನ್ಯಾಯದ ಪರಿಕಲ್ಪನೆಯೊಂದಿಗೆ ದೇಶದ ಜನತೆಗೆ ಸಮಾನತೆಯನ್ನು ಮತ್ತು ನ್ಯಾಯ ಕೊಡಲು ಮಹತ್ವದ ಸಂವಿಧಾನ ರಚಿಸಿ ದೇಶದ ಜನತೆಗೆ ಸಮರ್ಪಿಸಿರುವುದು ಅತ್ಯಂತ ಮಹತ್ವದ ಕಾರ್ಯವಾಗಿದೆ ಎಂದು ತಿಳಿಸಿದರು.

ಸಮಾಜದಲ್ಲಿನ ಆರ್ಥಿಕ, ಸಾಮಾಜಿಕ ಅಸಮಾನತೆಯನ್ನು ಹೋಗಲಾಡಿಸಲು, ಪರಿಹರಿಸಲು ನಾವುಗಳು ಕೈಗೊಂಡ ಹಾಗೂ ಕೈಗೊಳ್ಳಬೇಕಾದ ಕಾರ್ಯಗಳಿಗೆ ಸಂವಿಧಾನವು ದಿಕ್ಸೂಚಿಯಾಗಿದೆ. ಸಂವಿಧಾನದಿಂದಾಗಿ ಸಮಾಜದಲ್ಲಿನ ಪ್ರತಿಯೊಬ್ಬರಿಗೂ ಹಂತಹಂತವಾಗಿ ಸಮಾನವಕಾಶಗಳು ದೊರಕುತ್ತ ಸಮಾಜವು ಬದಲಾವಣೆಯತ್ತ ಸಾಗುತ್ತಿದೆ. ಮಹಿಳೆಯರು ಸಹ ಪ್ರತಿಯೊಂದು ರಂಗದಲ್ಲಿ ಸಾಧನೆ ತೋರುತ್ತಿದ್ದಾರೆ ಎಂದು ತಿಳಿಸಿದರು.

ಹಟ್ಟಿ ಚಿನ್ನದ ಗಣಿ ಕಂಪನಿಯ ಉಪಪ್ರಧಾನ ವ್ಯವಸ್ಥಾಪಕರು ಹಾಗೂ ಜಿಲ್ಲಾ ನೌಕರರ ಸಂಘದ ಅಧ್ಯಕ್ಷರಾದ ಶ್ರೀಕೃಷ್ಣ ಶಾವಂತಗೇರಿ ಅವರು ಮಾತನಾಡಿ, ಭಾರತ ದೇಶವು ಹಲವು ಧರ್ಮಗಳ ನಾಡಾಗಿದೆ. ವಿವಿಧತೆಯಲ್ಲಿ ಏಕತೆಯನ್ನು ತರುವಲ್ಲಿ ಸಂವಿಧಾನವು ನಮಗೆ ಮಾರ್ಗತೋರಿದೆ. ಡಾ.ಬಿ.ಆರ್.ಅಂಬೇಡ್ಕರ್ ಅವರು ಸಂವಿಧಾನದ ಮೂಲಕ ನಮಗೆ ಉತ್ತಮವಾದ ದಾರಿ ತೋರಿದ್ದಾರೆ. ಸದೃಢ ದೇಶ ನಿರ್ಮಾಣವು ಸಂವಿಧಾನದಿಂದ ಮಾತ್ರ ಸಾಧ್ಯ ಎಂದು ತಿಳಿಸಿದರು.

ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹ ಪ್ರಾಧ್ಯಾಪಕರಾದ ಡಾ.ಸುಭಾಷ್ ಚಂದ್ರ ಅವರು ವಿಶೇಷ ಉಪನ್ಯಾಸ ನೀಡಿ, ದೇಶದ ಸ್ವಾತಂತ್ರಕ್ಕಾಗಿ ಹಲವಾರು ನಾಯಕರು ಹೋರಾಟ ಮಾಡುತ್ತಿದ್ದಾಗ ಡಾ.ಬಿ.ಆರ್.ಅಂಬೇಡ್ಕರ್ ಅವರು ಸ್ವಾತಂತ್ರ ?? ಹೋರಾಟದಲ್ಲಿ ಭಾಗಿಯಾಗುವುದರ ಜೊತೆಗೆ ಸಮಾಜ ಸುಧಾರಣೆಯ ಗಣ ಕಾರ್ಯಕೈಗೊಂಡರು. ಜಾತಿ, ಮತ, ಮೂಢನಂಬಿಕೆ, ಕಂದಾಚಾರದಿಂದ ನರಳುತ್ತಿದ್ದ ಸಮಾಜವನ್ನು ಕಂಡು ಇವುಗಳನ್ನು ಸಂಪೂರ್ಣ ನಿರ್ಮೂಲನೆಯಾಗಲೇಬೇಕು ಎಂದು ಸಂವಿಧಾನ ರಚಿಸಿ ಅದರ ಶ್ರೇಷ್ಠತೆಯನ್ನು ತಿಳಿಸಿಕೊಟ್ಟರು.

ಆ ಸಮಾಜ, ಈ ಸಮಾಜ ಎನ್ನದೇ ಎಲ್ಲ ಸಮಾಜದವರು ಮೀಸಲು ಸೌಲಭ್ಯ ಪಡೆದು ಮುಂದೆ ಬರಲು ಡಾ.ಅಂಬೇಡ್ಕರ್ ಅವರು ನೀಡಿದ ಸಂವಿಧಾನದಿಂದ ಮಾತ್ರ ಸಾಧ್ಯವಾಗಿದೆ. ಸಂವಿಧಾನವನ್ನು ಸರಿಯಾದ ರೀತಿಯಲ್ಲಿ ಉಪಯೋಗಿಸಿದರೆ ಅದರಿಂದ ಸಮಸಮಾಜ ಕಟ್ಟಲು ಸಾಧ್ಯವಾಗುತ್ತದೆ. ಪ್ರತಿಯೊಬ್ಬರು ಸಂವಿಧಾನದ ಓದುವುದರ ಜೊತೆಗೆ ಪ್ರತಿಯೊಬ್ಬರ ಮನೆಯಲ್ಲೂ ಸಹ ಸಂವಿಧಾನದ ಪೀಠಿಕೆ, ಭಾವಚಿತ್ರವನ್ನು ಒಳಗೊಳ್ಳುವುದು ಸೂಕ್ತವಾಗಿದೆ ಎಂದು ತಿಳಿಸಿದರು.

ಸಂವಿಧಾನವು ನಮ್ಮ ಭಾರತ ದೇಶದ ಪವಿತ್ರ ಗ್ರಂಥವಾಗಿದೆ. ಸಮಾಜದಲ್ಲಿ ಉತ್ತಮ ಬದುಕು ರೂಪಿಸಿಕೊಳ್ಳಲು ಸಂವಿಧಾನವು ನಮಗೆ ಸಹಕಾರಿಯಾಗಿದೆ. ಹಗಲು ರಾತ್ರಿ ಲೆಕ್ಕಿಸದೆ ಶ್ರಮಪಟ್ಟು ಸಾವಿರಾರು ಪುಟಗಳ ಸಂವಿಧಾನವನ್ನು ಸಿದ್ಧಗೊಳಿಸಿದ ಕೀರ್ತಿ ಡಾ.ಬಿ.ಆರ್.ಅಂಬೇಡ್ಕರ್ ಅವರಿಗೆ ಸಲ್ಲುತ್ತದೆ ಎಂದರು.

ಅಸಮಾನತೆಯು ನಮ್ಮ ದೇಶದಲ್ಲಿ ಇನ್ನು ಸಹ ನೆಲೆಯೂರಿದೆ. ಅಸಮಾನತೆಯನ್ನು ಅಳಿಸಲು ನಾವು ಮನುಷ್ಯರನ್ನು ಮನುಷ್ಯರಂತೆಯೇ ಕಾಣಬೇಕಿದೆ. ಡಾ.ಬಿ.ಆರ್.ಅಂಬೇಡ್ಕರ್ ಹಾಗೂ ಅವರು ರಚಿಸಿದ ಸಂವಿಧಾನವು ಕೇವಲ ಒಂದೇ ಸಮುದಾಯಕ್ಕೆ ಸೀಮಿತವಾಗಿಲ್ಲ ಎಂಬುದನ್ನು ನಾವೆಲ್ಲರೂ ಮೊದಲು ಅರಿಯಬೇಕು. ಸಂವಿಧಾನವು ನ್ಯಾಯವಾದಿಗಳ ಸ್ವತ್ತು ಎಂದು ಭಾವಿಸದೇ, ಅದು ಎಲ್ಲರ ಸ್ವತ್ತು, ಸಂವಿಧಾನವು ಸದಾಕಾಲ ಚೈತನ್ಯವಾಗಿದೆ ಎಂಬುದನ್ನು ತಿಳಿಯಬೇಕು. ಸಂವಿಧಾನದ ಬಗ್ಗೆ ಬರೀ ಮಾತನಾಡದೇ, ಭಾಷಣ ಮಾಡದೇ ಮನೆಮನೆಗೆ ತೆರಳಿ ಅದರ ಅರಿವು ಮತ್ತು ಮನವರಿಕೆ ಮಾಡಿಕೊಡುವ ಕಾರ್ಯ ಆಗಬೇಕಿದೆ ಎಂದು ಅವರು ಸಲಹೆ ಮಾಡಿದರು.

ಗಮನ ಸೆಳೆದ ಜಾನ್‌ವೆಸ್ಲಿ: ಸಂವಿಧಾನ ದಿನಾಚರಣೆಯ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದ ಮುಖಂಡರು ಮತ್ತು ಹೋರಾಟಗಾರರಾದ ಜಾನ್‌ವೆಸ್ಲಿ ಟಿ ಕಾತರಕಿ ಅವರು ಡಾ.ಬಿ.ಆರ್.ಅಂಬೇಡ್ಕರ್ ವೇಷ ಧರಿಸಿ ಗಮನ ಸೆಳೆದರು.

ಅಂಬೇಡ್ಕರ್ ಗೀತೆಗಳ ಗಾಯನ: ಸಮತಾ ಸೈನಿಕ ದಳದ ಜಿಲ್ಲಾಧ್ಯಕ್ಷರು ಹಾಗೂ ಕಲಾವಿದರಾದ ಪರಶುರಾಮ ಅರೋಲಿ ಅವರು ಕಾರ್ಯಕ್ರಮದಲ್ಲಿ ಪ್ರಾರ್ಥಿಸಿ, ಅಂಬೇಡ್ಕರ್ ಗೀತೆಗಳ ಗಾಯನ ನಡೆಸಿಕೊಟ್ಟರು.

ಸಂವಿಧಾನ ದಿನಾಚರಣೆಯ ಕಾರ್ಯಕ್ರಮದಲ್ಲಿ ವಿವಿಧ ಸಂಘಟನೆಗಳ ಮುಖಂಡರಾದ ಕೆ.ಇ.ಕುಮಾರ, ಎಂ.ಆರ್.ಭೇರಿ, ಅನಿತಾ ನವಲಕಲ್, ನಿವೇದಿತಾ ಎನ್, ವಿಶ್ವನಾಥ ಪಟ್ಟಿ, ಬಸವರಾಜ ಸಾಸಲಮರಿ, ಗಿರಿಯಪ್ಪ ನೆಲಹಾಳ, ಕರುಣಕುಮಾರ ಕಟ್ಟಿಮನಿ, ಪಿ.ಪ್ರಭಾಕರ, ಪ್ರಾಣೇಶ ಮಂಚಾಳ, ರವಿ ದಾದಸ, ಎಂ.ವೆಂಕಟೇಶ ಅರೋಲಿಕರ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಸಿಂಧೂ ರಘು ಹೆಚ್.ಎಸ್., ಆದಿ ಜಾಂಬವ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರಾದ ರಾಜೇಂದ್ರ ಜಲ್ದಾರ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಶಿವಮಾನಪ್ಪ ಸೇರಿದಂತೆ ಇನ್ನೀತರರು ಉಪಸ್ಥಿತರಿದ್ದರು. ಸಮಾರಂಭದಲ್ಲಿ ವಿವಿಧ ಶಾಲಾ ಕಾಲೇಜುಗಳ, ವಸತಿ ನಿಲಯಗಳ ವಿದ್ಯಾರ್ಥಿಗಳು, ವಿವಿಧ ಸಂಘಟನೆಗಳ ಪದಾಧಿಕಾರಿಗಳು, ಮಹಿಳೆಯರು, ವಿವಿಧ ಇಲಾಖೆಯ ಅಧಿಕಾರಿಗಳು ಭಾಗಿಯಾಗಿದ್ದರು.

# ಮಗುವಿನ ದತ್ತು ಪ್ರಕ್ರಿಯೆ ಕಾನೂನಾತ್ಮಕವಾಗಿರಲು ಜಾಗೃತಿ ವಹಿಸಿ: ಡಾ ಗಣೇಶ್ ಕೆ ಸಲಹೆ

ಡಾ.ಎಮ್ ಶಾಕೀರ್ ಮೊಹಿಯುದ್ದೀನ್, ಜಿಲ್ಲಾ ಕುಟುಂಬ ಕಲ್ಯಾಣ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ.ಶಿವಕುಮಾರ್, ಡಾ.ಶೀತಲ್, ಬಾಯಿ ಆರೋಗ್ಯ ನೋಡಲ್ ಅಧಿಕಾರಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಡಿವೈಹೆಚ್‌ಓ ಬಸಯ್ಯ, ಆಪ್ತ ಸಹಾಯಕರಾದ ಲೇಪಾಕ್ಷಯ್ಯ, ಮಕ್ಕಳ ರಕ್ಷಣಾ ಘಟಕದ ತಿಕ್ಕಯ್ಯ, ದಿನೇಶ್, ಶೋಭಾ, ಎಲ್ಲ ಕಾರ್ಯಕ್ರಮ ಅಧಿಕಾರಿಗಳು ಹಾಗೂ ಟಿಬಿ ವಿಭಾಗದ ಅಧಿಕಾರಿಗಳು, ವೈದ್ಯಾಧಿಕಾರಿಗಳು ಮತ್ತು ಸಿಬ್ಬಂದಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9036887793

# ಸತೀಶ್ ಜೊತೆ ಡಿಕೆಶಿ ಸುದೀರ್ಘ ಚರ್ಚೆ

**ಬೆಂಗಳೂರು, ನ. 26–** ರಾಜ್ಯ ಕಾಂಗ್ರೆಸ್‌ನ ಅಧಿಕಾರ ಹಂಚಿಕೆಯ ಬಗ್ಗೆ ಹೈಕಮಾಂಡ್ ತೀರ್ಮಾನ ಹೊರ ಬೀಳುವ ಮುನ್ನವೇ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸಿದ್ದರಾಮಯ್ಯ ಆಪ್ತ ಬಣದಲ್ಲಿ ಗುರುತಿಸಿಕೊಂಡಿರುವ ಸಚಿವರುಗಳ ಜತೆ ಸಭೆ ನಡೆಸುತ್ತಿದ್ದು, ನಿನ್ನೆ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿಯವರ ಜತೆ ಸುದೀರ್ಘ ಸಮಾಲೋಚನೆ ನಡೆಸಿದ್ದಾರೆ.

ಮುಖ್ಯಮಂತ್ರಿ ಆಪ್ತ ವಲಯದಲ್ಲಿ ಸಚಿವ ಸತೀಶ್ ಜಾರಕಿಹೊಳಿಯವರ ಜತೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಿನ್ನೆ ತಡರಾತ್ರಿ ಖಾಸಗಿ ಹೋಟೆಲ್‌ನಲ್ಲಿ ಒಂದು ಗಂಟೆಗೂ ಹೆಚ್ಚು ಕಾಲ ಚರ್ಚೆ ನಡೆಸಿದ್ದು, ಅಧಿಕಾರ ಹಂಚಿಕೆ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಮನವೊಲಿಸಿ ಎಂದು ಮನವಿ ಮಾಡಿದರು ಎನ್ನಲಾಗಿದೆ.

ಈ ಹಿಂದೆ ಹೈಕಮಾಂಡ್ ಸಮ್ಮುಖದಲ್ಲಿ ಆಗಿರುವ ಮಾತುಕತೆಯಂತೆ ಸಿದ್ದರಾಮಯ್ಯನವರು ಅಧಿಕಾರ ಬಿಟ್ಟು ಕೊಡಲಿ. ಅವರ ಮಾರ್ಗದರ್ಶನದಲ್ಲಿ ಸರ್ಕಾರ ನಡೆಸುತ್ತೇನೆ, ನನಗೂ ಮುಖ್ಯಮಂತ್ರಿಯಾಗಲು ಸಹಕಾರ ಕೊಡಿ ಎಂದು ಸತೀಶ್ ಜಾರಕಿಹೊಳಿ ರವರಲ್ಲಿ ಕೋರಿದರು ಎನ್ನಲಾಗಿದೆ.

ಅಧಿಕಾರ ಹಂಚಿಕೆಯಾಗಿ ನಾನು ಮುಖ್ಯಮಂತ್ರಿಯಾದರೆ ನಿಮಗೆ ಕೆಪಿಸಿಸಿ ಅಧ್ಯಕ್ಷ ಸ್ಥಾನ ಸಿಗಲಿದೆ. ಉಪಮುಖ್ಯಮಂತ್ರಿ ಪಟ್ಟವೂ ದೊರಕುವಂತೆ ಪ್ರಯತ್ನ ನಡೆಸುತ್ತೇನೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರ ಮನವೊಲಿಸಿ ಅಧಿಕಾರ ಹಂಚಿಕೆಯನ್ನು ಸುಸೂತ್ರಗೊಳಿಸಿ ಎಂದು ಸತೀಶ್ ರವರಿಗೆ ಡಿಕೆಶಿ ತಿಳಿಸಿದರು ಎನ್ನಲಾಗಿದೆ.

ನಾವೆಲ್ಲಾ ಒಟ್ಟಾಗಿ, ಒಗ್ಗಟ್ಟಾಗಿ ಕೆಲಸ ಮಾಡೋಣ. 2028ರ ಚುನಾವಣೆಯಲ್ಲಿ ಮತ್ತೆ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರೋಣ. ಹಾಗಾಗಿ ಅಧಿಕಾರ ಹಂಚಿಕೆಯ ಗೊಂದಲವನ್ನು ಪರಿಹರಿಸಿ, ಸಿದ್ದರಾಮಯ್ಯನವರಿಗೆ ಎಲ್ಲವನ್ನು ಮನಮುಟ್ಟುವಂತೆ ಹೇಳಿ ಎಂದು ಸತೀಶ್ ರವರಿಗೆ ಡಿ.ಕೆ. ಶಿವಕುಮಾರ್ ಹೇಳಿದರು ಎಂದು ಹೇಳಲಾಗಿದೆ.

ಸಚಿವ ಸತೀಶ್ ಜಾರಕಿಹೊಳಿಯವರ ಭೇಟಿಗೂ ಮುನ್ನ ನಿನ್ನೆ ರಾತ್ರಿ ಸಚಿವ ಜಮೀರ್ ಅಹಮದ್ ರವರ ಜತೆಯೂ ಡಿ.ಕೆ. ಶಿವಕುಮಾರ್ ರವರು ಚರ್ಚೆ ನಡೆಸಿದ್ದರು. ಇದಕ್ಕೂ ಮೊದಲು ಪ್ರಿಯಾಂಕ ಖರ್ಗೆಯವರ ಜತೆಯೂ ಚರ್ಚೆ ನಡೆಸಿದ್ದರು.

ಅಧಿಕಾರ ಹಂಚಿಕೆಯ ಬಗ್ಗೆ ಹೈಕಮಾಂಡ್ ತೀರ್ಮಾನ ಪ್ರಕಟವಾಗುವ ಮೊದಲೇ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮುಖ್ಯಮಂತ್ರಿ ಆಪ್ತ ಬಣದ ಸಚಿವರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳುವ ಪ್ರಯತ್ನ ನಡೆಸಿದ್ದು, ಇದರ ಭಾಗವಾಗಿ ಒಬ್ಬೊಬ್ಬರನ್ನು ಭೇಟಿ ಮಾಡಿ ಚರ್ಚೆ ನಡೆಸುತ್ತಿದ್ದಾರೆ.

**ಸ್ವಲ್ಪ ಕಾಯಿರಿ: ಡಿಕೆಶಿಗೆ ರಾಹುಲ್ ಸಂದೇಶ–**ಅಧಿಕಾರ ಹಂಚಿಕೆಯ ಜಟಾಪಟಿ ಕಾಂಗ್ರೆಸ್‌ನಲ್ಲಿ ಜೋರಾಗಿರುವಾಗಲೇ ಕಾಂಗ್ರೆಸ್ ವರಿಷ್ಠ ರಾಹುಲ್‌ಗಾಂಧಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರವರಿಗೆ ಸ್ವಲ್ಪ ಕಾಯಿರಿ, ನಾನು ನಿಮ್ಮನ್ನು ಸಂಪರ್ಕಿಸುತ್ತೇನೆ (Please Wait I Will Call You Back) ಎಂಬ ಸಂದೇಶ ಕಳುಹಿಸಿದ್ದಾರೆ.

ಅಧಿಕಾರ ಹಂಚಿಕೆಯ ಗೊಂದಲಗಳನ್ನು ಪರಿಹರಿಸಿ ಅಧಿಕಾರ ಹಂಚಿಕೆಯ ಸೂತ್ರವನ್ನು ಅಂತಿಮಗೊಳಿಸುವ ಸಂಬಂಧ ಕಾಂಗ್ರೆಸ್ ವರಿಷ್ಠ ರಾಹುಲ್‌ಗಾಂಧಿಯವರನ್ನು ಭೇಟಿ ಮಾಡಲು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪ್ರಯತ್ನ ನಡೆಸಿದ್ದು, ಇಂದು ಅವರ ಸಮಯಕ್ಕಾಗಿ ಡಿ.ಕೆ. ಶಿವಕುಮಾರ್ ದೂರವಾಣಿ ಮೂಲಕ ರಾಹುಲ್‌ಗಾಂಧಿಯವರನ್ನು ಸಂಪರ್ಕಿಸಿದ್ದಾರೆ. ಆಗ ರಾಹುಲ್ ಗಾಂಧಿಯವರ ದೂರವಾಣಿಯಿಂದ ಸ್ವಲ್ಪ ಕಾಯಿರಿ, ನಾನೇ ನಿಮ್ಮನ್ನು ಸಂಪರ್ಕಿಸುತ್ತೇನೆ ಎಂಬ ಸಂದೇಶ ಬಂದಿದೆ ಎಂದು ಉಪಮುಖ್ಯಮಂತ್ರಿಗಳ ಆಪ್ತ ಮೂಲಗಳು ಹೇಳಿವೆ. ರಾಜ್ಯ ಕಾಂಗ್ರೆಸ್‌ನಲ್ಲಿ ಅಧಿಕಾರ ಹಂಚಿಕೆಯ ಜಟಾಪಟಿ ತಾರಕ್ಕೇರಿರುವ ಸಂದರ್ಭದಲ್ಲಿ ಕೆಲ ದಿನಗಳ ಹಿಂದೆ ದೆಹಲಿಗೆ ಹೋಗಿದ್ದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರವರು ರಾಹುಲ್‌ಗಾಂಧಿಯವರನ್ನು ಭೇಟಿಯಾಗಲು ಪ್ರಯತ್ನ ನಡೆಸಿದ್ದ ರಾದರೂ



ಅದು ಸಾಧ್ಯವಾಗಿರಲಿಲ್ಲ. ಇದಾದ ಬಳಿಕ ಸತತವಾಗಿ ರಾಹುಲ್ ಗಾಂಧಿಯವರನ್ನು ಸಂಪರ್ಕಿಸಲು ಪ್ರಯತ್ನ ನಡೆಸಿದ್ದ ಡಿಕೆಶಿಯವರಿಗೆ ಈಗ ರಾಹುಲ್‌ಗಾಂಧಿಯವರು ಸ್ವಲ್ಪ ಕಾಯಿರಿ, ನಾನೇ ಸಂಪರ್ಕಿಸುತ್ತೇನೆ ಎಂಬ ಸಂದೇಶ ರವಾನಿಸಿದ್ದಾರೆ.

**ನಾಳೆ ಇಲ್ಲವೇ ನಾಡಿದ್ದು ಖರ್ಗೆ–ರಾಹುಲ್ ಭೇಟಿ–**ಅಧಿಕಾರ ಹಂಚಿಕೆಯ ಸಂಬಂಧ ರಾಜ್ಯ ಕಾಂಗ್ರೆಸ್‌ನ ಎಲ್ಲಾ ನಾಯಕರುಗಳ ಜತೆ ಸಮಾಲೋಚಿಸಿರುವ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರು ನಿನ್ನೆ ದೆಹಲಿಗೆ ತೆರಳಿದ್ದು, ನಾಳೆ ಇಲ್ಲವೇ ನಾಡಿದ್ದು ಕಾಂಗ್ರೆಸ್ ವರಿಷ್ಠ ರಾಹುಲ್‌ಗಾಂಧಿಯವರನ್ನು ಭೇಟಿ ಮಾಡಿ ರಾಜ್ಯ ಕಾಂಗ್ರೆಸ್ ವಿದ್ಯಮಾನಗಳ ಬಗ್ಗೆ ವರದಿ ನೀಡುವರು.

ನಾಳೆ ದೆಹಲಿಯಲ್ಲಿ ಎಐಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಕೆ.ಸಿ. ವೇಣುಗೋಪಾಲ್ ಹಾಗೂ ರಣದೀಪ್ ಸಿಂಗ್ ಸುರ್ಜೇವಾಲಾ, ಇವರುಗಳನ್ನು ಭೇಟಿ ಮಾಡಿ ಚರ್ಚೆ ನಡೆಸಿದ ನಂತರ ನಾಳೆ ಇಲ್ಲವೇ ನಾಡಿದ್ದು ರಾಹುಲ್‌ಗಾಂಧಿಯವರನ್ನು ಭೇಟಿ ಮಾಡುವರು.

ರಾಜ್ಯ ಕಾಂಗ್ರೆಸ್‌ನ ಅಧಿಕಾರ ಹಂಚಿಕೆಯ ಕಗ್ಗಂಟ್ಟನ್ನು ಬಿಡಿಸುವ ಜವಾಬ್ದಾರಿ ರಾಹುಲ್‌ಗಾಂಧಿಯವರ ಹೆಗಲೇರಿದ್ದು, ಅವರು ಎಲ್ಲ ಜತೆ ಸಮಾಲೋಚಿಸಿ ಈ ವಾರದೊಳಗೆ ಒಂದು ನಿರ್ಧಾರ ಪ್ರಕಟಿಸುವ ಸಾಧ್ಯತೆ ಇದೆ.

## 8.11 ಲಕ್ಷ ರೂ.ಮೊತ್ತದ 23 ಕ್ವಿಂಟಾಲ್ ಅಕ್ಕಿ ವಶ




**ಕಲಬುರಗಿ,ನ.26–**ನಗರದ ಸಬ್ ಅರ್ಬನ್ ಪೊಲೀಸ್ ಠಾಣೆ ವ್ಯಾಪ್ತಿಯ ಪಟ್ಟಣ ಟೋಲ್ ನಾಕಾ ಮಾರ್ಗವಾಗಿ ಮಹಾರಾಷ್ಟ್ರ ಕಡೆಗೆ ಅಕ್ರಮವಾಗಿ ಪಡಿತರ ಅಕ್ಕಿ ಸಾಗಿಸಲಾಗುತ್ತಿದೆ ಎಂಬ ಮಾಹಿತಿ ಮೇಲೆ ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ.ಅವರ ನಿರ್ದೇಶನದಂತೆ ಡಿಸಿಪಿ ಪ್ರವೀಣ್ ಹೆಚ್.ನಾಯಕ್, ಸಬ್–ಅರ್ಬನ್ ಉಪ ವಿಭಾಗದ ಸಹಾಯಕ ಪೊಲೀಸ್ ಆಯುಕ್ತ ಬಸವೇಶ್ವರ ಹೀರಾ ಅವರ ಮಾರ್ಗದರ್ಶನದಲ್ಲಿ ಎಎಸ್‌ಐ ನಾಗರಾಜ, ಸಿಬ್ಬಂದಿಗಳಾದ ಭೀರಣ್ಣ ಅವರು ದಾಳಿ ನಡೆಸಿ 8,11,650 ರೂ.ಮೌಲ್ಯದ 23 ಕ್ವಿಂಟಾಲ್ ಅಕ್ಕಿ ಜಪ್ತಿ ಮಾಡಿದ್ದಾರೆ.

ಲಾರಿ ಚಾಲಕ ನಬಿ ಕಾಲೋನಿಯ ಅಲ್ಲಾವುದ್ದೀನ್ ತಂದೆ ಖಾಸೀಂಸಾಬ್ (36) ಹಾಗೂ ಲಾರಿ ಮಾಲಿಕನ ವಿರುದ್ಧ ಸಬ್–ಅರ್ಬನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಳ್ಳಲಾಗಿದೆ.

ದಾಳಿ ನಡೆಸಿ ಪಡಿತರ ಅಕ್ಕಿ ವಶ ಪಡಿಸಿಕೊಳ್ಳುವಲ್ಲಿ ಯಶಸ್ವಿಯಾದ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ಕಾರ್ಯವನ್ನು ನಗರ ಪೊಲೀಸ್ ಆಯುಕ್ತರಾದ ಡಾ.ಶರಣಪ್ಪ ಎಸ್.ಡಿ.ಶ್ಲಾಘಿಸಿದ್ದಾರೆ.

# ಅದ್ದೂರಿ ದತ್ತ ಜಯಂತಿ ಆಚರಣೆಗೆ ನಿರ್ಧಾರ : ಶಂಕರಲಿಂಗ ಶಿವಾಚಾರ್ಯ ಸ್ವಾಮೀಜಿ

**ಔರಾದ್ : ನ.26–**ಪ್ರತಿವರ್ಷದಂತೆ ಡಿಸೆಂಬರ್ 04 ರಂದು ದತ್ತ ಜಯಂತಿ ಆಚರಣೆ ಇದ್ದು ಅದ್ದೂರಿ ಆಚರಣೆಗೆ ಎಲ್ಲರೂ ಸಹಕರಿಸಬೇಕು ಎಂದು ದತ್ತ ಸಾಯಿ ಶನೀಶ್ವರ ದೇವಸ್ಥಾನ ಸಮಿತಿ ಅಧ್ಯಕ್ಷರಾದ ಪೂಜ್ಯ ಶ್ರೀ ಷ.ಬ್ರ 108 ಶ್ರೀ ಶಂಕರಲಿಂಗ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ಪಟ್ಟಣದ ದತ್ತ ಸಾಯಿ ಶನೀಶ್ವರ ಮಂದಿರದಲ್ಲಿ ಮಂಗಳವಾರ ನಡೆದ ದತ್ತ ಜಯಂತಿ ಹಾಗೂ 37ನೇ ದತ್ತ ಜಾತ್ರಾ ಮಹೋತ್ಸವ ನಿಮಿತ್ತ ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು ಪ್ರತಿವರ್ಷದಂತೆ ಈ ವರ್ಷವೂ ಸಹ ದತ್ತ ಜಯಂತಿ ಹಾಗೂ ದತ್ತ ಜಾತ್ರಾ ಮಹೋತ್ಸವ ಅದ್ದೂರಿಯಾಗಿ ಆಚರಿಸಲು ನಿರ್ಧರಿಸಲಾಗಿದೆ. ಜಾತ್ರಾ ಮಹೋತ್ಸವ ನಿಮಿತ್ತ ನವೆಂಬರ್ 28.ರಂದು, ದೇವಸ್ಥಾನದಲ್ಲಿ ಹರಿನಾಮ ಸಪ್ತಾಹ ಕಾರ್ಯಕ್ರಮ ನಡೆಯಲಿದೆ ಪ್ರತಿ ನಿತ್ಯ ಧಾರ್ಮಿಕ ಕಾರ್ಯಕ್ರಮಗಳು ಸೇರಿದಂತೆ ಡಿಸೆಂಬರ್ 02 ರಂದು ಸಾಯಂಕಾಲ ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ ಜರುಗಲಿದೆ. ಪ್ರತಿ ವರ್ಷದಂತೆ ಈ



ವರ್ಷವೂ ಸಹ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಮಹನೀಯರಿಗೆ ಶ್ರೀ ಗುರು ಪ್ರಶಸ್ತಿ ನೀಡಿ ಗೌರವಿಸಲಾಗುವುದು.ಡಿಸೆಂಬರ್ 4 ರಂದು ಜಾತ್ರಾ ಮಹೋತ್ಸವ ಹಾಗೂ ಗಾತಾ ಪೂಜೆ ನೆರವೇರಲಿದೆ ನಂತರ ಅನ್ನ ದಾಸೋಹ ಜರುಗಲಿದೆ. ಡಿಸೆಂಬರ್ 5ರಂದು ಪಲ್ಲಕ್ಕಿ ಉತ್ಸವ ಜರುಗಲಿದೆ ಸರ್ವ ಸದ್ಭಕ್ತರು ಹೆಚ್ಚಿನ ಸಂಖ್ಯೆ ಯಲ್ಲಿ ಪಾಲ್ಗೊಂಡು ಜಾತ್ರಾ ಯಶಸ್ವಿಗೊಳಿಸಬೇಕೆಂದು ತಿಳಿಸಿದರು.

ಈ ಸಂದರ್ಭದಲ್ಲಿ ದೇವಸ್ಥಾನ ಸಮಿತಿ ಸದಸ್ಯರಾದ ಕಿರಣ ಉಪ್ಪೆ, ಸಂಗಯ್ಯ ಸ್ವಾಮಿ, ಚಂದ್ರಕಾಂತ ಪಾಟೀಲ, ಚಂದ್ರಕಾಂತ ಜಾಧವ, ಶರಣಪ್ಪ ಪಾಟೀಲ, ಸಂಜೀವ ಶೆಟಕಾರ, ಡಾ. ಧನರಾಜ ರಾಗಾ, ರಾಜ್‌ಕುಮಾರ ಎಡವೆ ಶಿವಾನಂದ ಕನಕೆ, ಅಶೋಕ ಶೆಂಬೆಳ್ಳಿ, ಅಂಬಾದಾಸ ನಳಗೆ, ಅಮರಸ್ವಾಮಿ ಸ್ಥಾವರಮಠ, ಸಂದೀಪ ಪಾಟೀಲ, ವಿರೇಶ ಅಲ್ಮಾಜೆ, ಅನಿಲ ದೇವಕತೆ, ಬಸ್ಸು ಚೌಕಂಪಳ್ಳಿ, ಅಂಬ್ರೇಶ ಹಳೆಂಬುರೆ, ಮಹಾದೇವ ಶಿಂಧೆ ಸೇರಿದಂತೆ ಇನ್ನಿತರರಿದ್ದರು.

## ಮಲ್ಲಯ್ಯ ಗುಡಿಸಲಿ ನಿಧನ



**ಮಸ್ಕಿ,ನ.26–** ಸ್ಥಳೀಯ ಭೋವಿ (ವಡ್ಡರ್) ಸಮಾಜದ ಮುಖಂಡ ಮಲ್ಲಯ್ಯ ಗುಡಿಸಲಿ (75) ಮಂಗಳವಾರ ರಾತ್ರಿ ಪಟ್ಟಣದ ಅವರ ಸ್ವಗೃಹದಲ್ಲಿ ನಿಧನರಾದರು.

ಪತ್ನಿ, ಮೂವರು ಪುತ್ರರು, ನಾಲ್ವರು ಪುತ್ರಿಯರು ಇದ್ದಾರೆ. ಮೃತರು ಗ್ರಾಮ ಪಂಚಾಯಿತಿ ಸದಸ್ಯರಾಗಿ ಸೇವೆ ಸಲ್ಲಿಸಿದ್ದರು. ಬುಧವಾರ ಮಧ್ಯಾಹ್ನ ಪಟ್ಟಣದ ರುದ್ರಭೂಮಿಯಲ್ಲಿ ಅಂತ್ರಕ್ರಿಯೆ ನಡೆಸಲಾಯಿತು.

# ದೇಶಾದ್ಯಂತ ಸಂವಿಧಾನ ದಿನಾಚರಣೆ

ನವದೆಹಲಿ, ನ. 26– ಭಾರತದ ಸಂವಿಧಾನವನ್ನು ಅಂಗೀಕರಿಸಿದ ನವೆಂಬರ್ 26ರ ದಿನವಾದ ಇಂದು ದೇಶದ ಎಲ್ಲೆಡೆ ಸಂವಿಧಾನ ದಿನಾಚರಣೆಯನ್ನು ಆಚರಿಸಲಾಗುತ್ತಿದೆ.ಸಂಸತ್‌ನ ಐತಿಹಾಸಿಕ ಸೆಂಟ್ರಲ್ ಹಾಲ್‌ನಲ್ಲಿ ಇಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಸಂವಿಧಾನದ ಆಶಯವನ್ನು ಓದುವ ಮೂಲಕ ಸಂವಿಧಾನ ದಿನಾಚರಣೆಗೆ ಚಾಲನೆ ನೀಡಿದರು.

ಸಂಸತ್ ಭವನದಲ್ಲಿ ನಡೆದ ಸಂವಿಧಾನ ದಿನಾಚರಣೆ ಕಾರ್ಯಕ್ರಮದಲ್ಲಿ ಉಪ ರಾಷ್ಟ್ರಪತಿ ರಾಧಾಕೃಷ್ಣನ್, ಲೋಕಸಭಾ ಅಧ್ಯಕ್ಷ ಓಂಬಿರ್ಲಾ, ಪ್ರಧಾನಿ ನರೇಂದ್ರಮೋದಿ, ರಾಜ್ಯಸಭೆಯ ವಿರೋಧ ಪಕ್ಷದ ನಾಯಕರು ಗಳಾದ ಮಲ್ಲಿಕಾರ್ಜುನಖರ್ಗೆ, ಲೋಕಸಭೆಯ ವಿರೋಧ ಪಕ್ಷದ ನಾಯಕರುಗಳಾದ ರಾಹುಲ್‌ಗಾಂಧಿ ಸೇರಿದಂತೆ ಕೇಂದ್ರದ ಎಲ್ಲ ಸಚಿವರು, ಸಂಸತ್ ಸದಸ್ಯರು ಭಾಗಿಯಾದರು.

ಇದೇ ಸಂದರ್ಭದಲ್ಲಿ ರಾಷ್ಟ್ರಪತಿ ಮುರ್ಮು ಅವರು ಮಲೆಯಾಳಂ, ಬೋಡೊ, ಕಾಶ್ಮೀರಿ, ತೆಲುಗು, ನೇಪಾಳಿ, ಪಂಜಾಬಿ, ಒಡೆಯಾ, ಅಸ್ಸಾಮಿ ಮತ್ತು ಮರಾಠಿ ಭಾಷೆ ಸೇರಿದಂತೆ 9 ಭಾಷೆಗಳಲ್ಲಿ ಭಾರತೀಯ ಸಂವಿಧಾನದ ಪುಸ್ತಕ ಮತ್ತು ಡಿಜಿಟಲ್ ಆವೃತ್ತಿಗಳನ್ನು ಅನಾವರಣಗೊಳಿಸಿದರು.

**ಏಕತೆ ಮತ್ತು ಸಾಮಾಜಿಕ ನ್ಯಾಯದ ಹೆಗ್ಗುರುತು–**ಇದೇ ಸಂದರ್ಭದಲ್ಲಿ ಮಾತನಾಡಿದ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ಸಂವಿಧಾನವನ್ನು ವಸಾಹತು ಶಾಹಿ ಚಿಂತನೆಯನ್ನು ತಿರಸ್ಕರಿಸುವ ಮತ್ತು ರಾಷ್ಟ್ರೀಯತಾ ವಾದಿ ಮನಸ್ಥಿತಿಯನ್ನು ಬೆಳೆಸುವ ಪಠ್ಯ ಎಂದು ಬಣ್ಣಿಸಿದರು.ಪ್ರಜಾಪ್ರಭುತ್ವದ ಅಡಿಪಾಯವನ್ನು ರೂಪಿಸುವ ಕರ್ತವ್ಯಗಳೊಂದಿಗೆ ಸಾಂವಿಧಾನಿಕ ಮೌಲ್ಯಗಳನ್ನು ಎತ್ತಿ ಹಿಡಿಯುವಂತೆಯೂ ಕರೆ ನೀಡಿದರು.ನಮ್ಮ ಸಂವಿಧಾನದ ರಚನೆಕಾರರ ದೃಷ್ಟಿಕೋನ, ಸುಧಾರಣೆಗಳನ್ನು ಪ್ರತಿಬಿಂಬಿಸುತ್ತವೆ ಮತ್ತು ವಿಕಸಿತ ಭಾರತದ ಪ್ರಗತಿಗೆ ಮಾರ್ಗದರ್ಶನ ನೀಡುತ್ತವೆ ಎಂದು ಹೇಳಿದರು.ನಾಗರಿಕರ ಹಕ್ಕುಗಳನ್ನು ಸುರಕ್ಷಿತಗೊಳಿಸಲು ಸಂವಿಧಾನ ನಿರ್ಮಾತೃಗಳು ಸಂವಿಧಾನವನ್ನು ರೂಪಿಸಿದರು ಎಂದು ಅವರು ಹೇಳಿದರು.

ರಾಷ್ಟ್ರೀಯ ಏಕತೆ ಮತ್ತು ಸಾಮಾಜಿಕ ನ್ಯಾಯವನ್ನು ಬಲಪಡಿಸಲು ತೆಗೆದುಕೊಂಡ ಕ್ರಮಗಳನ್ನು ಒತ್ತಿ ಹೇಳಿ, ಸಂವಿಧಾನದ 30ನೇ ವಿಧಿಯನ್ನು ತೆಗೆದು ಹಾಕುವುದು ದೇಶದ ಏಕೀಕರಣಕ್ಕೆ ಇರುವ ಅಡೆತಡೆಗಳನ್ನು ನಿವಾರಿಸಿತು ಮತ್ತು ತ್ರಿವಳಿ ತಲಾಕ್‌ನ ಸಾಮಾಜಿಕ ಅನಿಷ್ಠವನ್ನು ಕೊನೆಗೊಳಿಸುವುದು ಸಮಾನತೆಯ ಕಡೆಗೆ ಮಹತ್ವದ ಹೆಜ್ಜೆ ಎಂದು ಹೇಳಿದರು.

**ಸಂವಿಧಾನವನ್ನು ಬಲಪಡಿಸೋಣ ಮೋದಿ ಕರೆ–**ಸಂವಿಧಾನ ಪ್ರಜಾಪ್ರಭುತ್ವದ ಬಲವಾದ ಅಡಿಪಾಯ. ನಮ್ಮ ಕಾರ್ಯಗಳ ಮೂಲಕ ಮೌಲ್ಯಗಳನ್ನು ಬಲಪಡಿಸೋಣ ಎಂದು ಪ್ರಧಾನಿ ಮೋದಿ ಕರೆ ನೀಡಿದರು.ಸಂವಿಧಾನ ದಿನಾಚರಣೆ ಅಂಗವಾಗಿ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಇಂದು ಸಂವಿಧಾನ ನಿರ್ಮಾತೃಗಳನ್ನು ಗೌರವಿಸುವ ದಿನ. ಎಲ್ಲರಿಗೂ ಸಂವಿಧಾನ ದಿನಾಚರಣೆ ಶುಭಾಶಯಗಳು ಎಂದು ಹೇಳಿದ್ದಾರೆ.

ಸಂವಿಧಾನವನ್ನು ರೂಪಿಸಿದ ಎಲ್ಲರಿಗೂ ನನ್ನ ನಮನಗಳು ಎಂದು ಹೇಳಿರುವ ಅವರು, ಸ್ವತಂತ್ರ ಭಾರತಕ್ಕೆ ಸಂವಿಧಾನ ರೂಪಿಸಲು ರಚನಾ ಸಭೆ ಸ್ಥಾಪನೆಯಾಗಿದ್ದು 1946 ರಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ರವರ ನೇತೃತ್ವದಲ್ಲಿ ನೂರಾರು ಮಂದಿ ಸುಮಾರು 3 ವರ್ಷ ಶ್ರಮಿಸಿ ಸಂವಿಧಾನ ರಚಿಸಿದರು. ಸಂವಿಧಾನ ರಚನಾ ಸಭೆಯು 1949ರ ನವೆಂಬರ್ 26 ರಂದು ಸಂವಿಧಾನವನ್ನು ಅಂಗೀಕರಿಸುತ ದೇಶದಲ್ಲಿ ಸಂವಿಧಾನವು 1950, ಜನವರಿ 26 ರಿಂದ ಜಾರಿಗೆ ಬಂತು ಎಂದು ಅವರು ಹೇಳಿ, ಸಂವಿಧಾನ ರಚನಾ ದಿನವಾದ ನವೆಂಬರ್ 26 ನ್ನು ದೇಶದ ಎಲ್ಲೆಡೆ ಸಂವಿಧಾನ ದಿನಾಚರಣೆಯಾಗಿ ಆಚರಿಸಲಾಗುತ್ತಿದೆ ಎಂದಿದ್ದಾರೆ.

ಭಾರತದ ನೂರಾರು ಜಾತಿ, ಹತ್ತಾರು ಧರ್ಮ, ವೈವಿಧ್ಯಮಯ ಸಂಸ್ಕೃತಿ, ಆಚರಣೆಗಳಿಂದ ಕಂಡಿರುವ ದೇಶಕ್ಕೆ ಸಂವಿಧಾನವನ್ನು ರೂಪಿಸುವುದು ಅತ್ಯಂತ ಸವಾಲಿನ ಕೆಲಸವಾ ಗಿತ್ತು. ಭಾರತವು ಇಂದು ಜಾಗತೀಕ ಮಟ್ಟದಲ್ಲಿ ಗಮನಾರ್ಹ ಸ್ಥಾನ ಪಡೆದಿದ್ದರೆ ಅದಕ್ಕೆ ಕಾರಣ ನಮ್ಮ ಸಶಕ್ತವಾದ ಸಂವಿಧಾನ. ಅದು ದೇಶದ ಆಡಳಿತ ಮತ್ತು ಜನರ ಚಿಂತನೆಯ ಚಾಲಕ ಶಕ್ತಿಯಾಗಿದೆ ಎಂದಿದ್ದಾರೆ.

**ಸಂವಿಧಾನ ಬಡವರ ರಕ್ಷಣಾ ಗುರಾಣಿ:ರಾಹುಲ್–**ಭಾರತದ ಸಂವಿಧಾನ ಬಡವರ ರಕ್ಷಣಾ ಗುರಾಣಿ ಎಂದು ರಾಹುಲ್‌ಗಾಂಧಿ ಅವರು ಸಂವಿಧಾನ ದಿನಾಚರಣೆ ಅಂಗವಾಗಿ ಎಕ್ಸ್‌ನಲ್ಲಿ ಟ್ವೀಟ್ ಮಾಡಿದ್ದಾರೆ.

ಸಂವಿಧಾನದ ಮೇಲೆ ಯಾವುದೇ ದಾಳಿಗೆ ಅವಕಾಶ ನೀಡುವುದಿಲ್ಲ



ಎಂದು ಪ್ರತಿಜ್ಞೆ ಮಾಡುವಂತೆ ದೇಶದ ಜನರಿಗೆ ಅವರು ಕರೆ ನೀಡಿ, ಸಂವಿಧಾನದ ಮೇಲಿನ ಯಾವುದೇ ದಾಳಿ ವಿರುದ್ಧ ಎದ್ದು ನಿಲ್ಲುವ ಮೊದಲಿಗ ನಾನು ಎಂದಿದ್ದಾರೆ. ಸಂವಿಧಾನ ಕೇವಲ ಪುಸ್ತಕವಲ್ಲ. ಇದು ದೇಶದ ಪ್ರತಿಯೊಬ್ಬ ನಾಗರಿಕರಿಗೂ ನೀಡುವ ವಾಗ್ದಾನವಾಗಿದೆ. ಯಾವುದೇ ಧರ್ಮ ಅಥವಾ ಜಾತಿಗೆ ಸೇರಿದವರಾಗಿರಲಿ, ಯಾವುದೇ ಪ್ರದೇಶದಿಂದ ಬಂದವರಾಗಿರಲಿ, ಯಾವುದೇ ಭಾಷೆಯನ್ನು ಮಾತನಾಡುವವರಾಗಿರಲಿ, ಬಡವರಿರಲಿ, ಶ್ರೀಮಂತರಿರಲಿ. ಎಲ್ಲರಿಗೂ ಸಮಾನತೆ, ಗೌರವ ಮತ್ತು ನ್ಯಾಯ ಸಿಗುತ್ತದೆ ಎಂಬ ಭರವಸೆ ಅದನ್ನು ರಕ್ಷಿಸುವುದು ನಮ್ಮ ಕರ್ತವ್ಯ ಎಂದಿದ್ದಾರೆ

**ಜಾತ್ಯತೀತ ಸಮಾಜವಾದ ರಕ್ಷಣೆ ಅಗತ್ಯ ಚಖರ್–**ಸಂವಿಧಾನದ ಮೂಲಭೂತ ತತ್ವಗಳಾದ ನ್ಯಾಯ. ಸಮಾನತೆ, ಸ್ವಾತಂತ್ರ್ಯ, ಸಹೋದರತ್ವ, ಜಾತ್ಯಾತೀತತೆ ಮತ್ತು ಸಮಾಜವಾದವನ್ನು ರಕ್ಷಿಸುವ ಅಗತ್ಯವಿದೆ ಎಂದು ರಾಜ್ಯಸಭೆಯ ವಿಪಕ್ಷ ನಾಯಕ ಹಾಗೂ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನಖರ್ಗೆ ಹೇಳಿದರು.

ಸಂವಿಧಾನ ದಿನಾಚರಣೆ ಅಂಗವಾಗಿ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಸಂವಿಧಾನವು ವಕೀಲರಿಗೆ ಕೇವಲ ಒಂದು ದಾಖಲೆಯಲ್ಲ. ಬದಲಾಗಿ ಅದು ಜೀವನ ವಿಧಾನ ಎಂಬ ಡಾ. ಬಿ. ಆರ್. ಅಂಬೇಡ್ಕರ್ ಅವರ ಹೇಳಿಕೆಯನ್ನು ಉಲ್ಲೇಖಿಸಿ ದೇಶದ ಏಕತೆ ಮತ್ತು ಸಮಗ್ರತೆಗಾಗಿ ಪ್ರೀತಿ, ಸಹೋದರತ್ವ ಮತ್ತು ಸಾಮರ ಸ್ಯಕ್ಕಾಗಿ ಪ್ರಜಾಪ್ರಭುತ್ವ ಮತ್ತು ಸಂವಿಧಾನದ ಮೌಲ್ಯಗಳನ್ನು ಕಾಪಾಡಿಕೊಳ್ಳಲು ನಾವು ಪ್ರತಿಜ್ಞೆ ಮಾಡೋಣ ಎಂದಿದ್ದಾರೆ.

**ರಾಜ್ಯದಲ್ಲೂ ಸಂವಿಧಾನ ದಿನಾಚರಣೆ–**ರಾಜ್ಯದಲ್ಲೂ ಸಂವಿಧಾನ ದಿನಾಚರಣೆ ಕಾರ್ಯಕ್ರಮ ನಡೆದಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಮಾಜ ಕಲ್ಯಾಣ ಸಚಿವ ಡಾ. ಹೆಚ್.ಸಿ. ಮಹದೇವಪ್ಪ ಸೇರಿದಂತೆ ಹಲವು ಸಚಿವರು, ಗಣ್ಯರು ಬೆಂಗಳೂರಿನ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಭಾಗಿಯಾಗಿ ಸಂವಿಧಾನ ರಕ್ಷಣೆಯ ಅಗತ್ಯತೆಯನ್ನು ಪ್ರತಿಪಾದಿಸಿದರು.

**ಕಾಲ್ನಡಿಗೆ ಜಾಥಾ–**ಈ ಕಾರ್ಯಕ್ರಮಕ್ಕೂ ಮೊದಲ ವಿಧಾನಸೌಧದ ಪೂರ್ವದ್ವಾರದಲ್ಲಿರುವ ಭವ್ಯ ಮೆಟ್ಟಿಲುಗಳ ಮುಂಭಾಗದಲ್ಲಿ ಆರಂಭಗೊಂಡ ಕಾಲ್ನಡಿಗೆ ಜಾತಾಕ್ಕೆ ಸಮಾಜ ಕಲ್ಯಾಣ ಸಚಿವ ಮಹದೇವಪ್ಪ ಚಾಲನೆ ನೀಡಿದರು

ನೂರಾರು ವಿದ್ಯಾರ್ಥಿಗಳು ಯುವಕ ಯುವತಿಯರು, ರಾಷ್ಟ್ರಧ್ವಜ ಹಿಡಿದು ಸಂವಿಧಾನ ಪ್ರತಿಗಳನ್ನು ಪ್ರದರ್ಶಿಸಿ ವಿಧಾನಸೌಧದಿಂದ ಅಂಬೇಡ್ಕರ್ ಭವನದವರೆಗೂ ಕಾಲ್ನಡಿಗೆ ಜಾಥ ಸಂವಿಧಾನದ ಆಶಯಗಳ ಭಿತ್ತಿಪತ್ರಗಳನ್ನು ಜಾಥಾದಲ್ಲಿ ಪ್ರದರ್ಶಿಸಲಾಯಿತು.

# ನಕಲಿ ನಂದಿನಿ ತುಪ್ಪ: ಕಿಂಗ್‌ಪಿನ್ ದಂಪತಿ ಬಂಧನ

**ಬೆಂಗಳೂರು,ನ.26–**ರಾಜ್ಯದಲ್ಲಿ ಸಂಚಲನ ಮೂಡಿಸಿದ್ದ ಹೆಚ್ಚು ಬೇಡಿಕೆಯ ನಂದಿನಿ ತುಪ್ಪವನ್ನು ಕಲಬೆರಕೆ ಮಾಡುತ್ತಿದ್ದ ಪ್ರಕರಣದ ಕಿಂಗ್ ಪಿನ್ ದಂಪತಿಯನ್ನು ಸಿಸಿಬಿ ಪೊಲೀಸರು ಬಂಧಿಸಿದ್ದಾರೆ.

ಹಗರಣದ ಸೂತ್ರಧಾರರಾದ ಮೈಸೂರು ಮೂಲದ ಶಿವಕುಮಾರ್ ಮತ್ತು ಅವರ ಪತ್ನಿ ರಮ್ಯಾ ಬಂಧಿತ ಆರೋಪಿಗಳಾಗಿದ್ದು,ಬಂಧಿತ ದಂಪತಿಯೇ ನಕಲಿ ನಂದಿನಿ ಉತ್ಪನ್ನಗಳ ತಯಾರಿಕೆ ಘಟಕದ ಕಿಂಗ್‌ಪಿನ್ ಎನ್ನುವುದು ತನಿಖೆಯಲ್ಲಿ ಪತ್ತೆಯಾಗಿದೆ.

**ನಕಲಿ ಉತ್ಪಾದನಾ ಘಟಕ:** ಬಂಧಿತ ದಂಪತಿಯು ನೆರೆಯ ತಮಿಳುನಾಡಿನಲ್ಲಿ ನಕಲಿ ತುಪ್ಪ ತಯಾರಿಕೆ ಘಟಕವನ್ನು ಸ್ಥಾಪಿಸಿದ್ದರು. ಈ ಘಟಕದ ಮೇಲೆ ಸಿಸಿಬಿ ಪೊಲೀಸರು ದಾಳಿ ನಡೆಸಿದಾಗ, ನಕಲಿ ತುಪ್ಪ ತಯಾರಿಸಲು ಬಳಸುತ್ತಿದ್ದ ದೊಡ್ಡ ದೊಡ್ಡ ಹೈಟೆಕ್ ಮತ್ತು ಅತ್ಯಾಧುನಿಕ ಯಂತ್ರಗಳು ಪತ್ತೆಯಾಗಿವೆ.

ಈ ಯಂತ್ರಗಳನ್ನು ಬಳಸಿಕೊಂಡು ದಂಪತಿಗಳು ನಂದಿನಿ ಲೇಬಲ್‌ನ ನಕಲಿ ತುಪ್ಪಗಳನ್ನು ತಯಾರಿಸಿ, ರೀ–ಪ್ಯಾಕಿಂಗ್ ಮಾಡಿ ಮಾರಾಟ ಮಾಡುತ್ತಿದ್ದರು. ದಾಳಿ ವೇಳೆ ಪೊಲೀಸರು ಯಂತ್ರಗಳನ್ನು ವಶಪಡಿಸಿಕೊಂಡಿದ್ದಾರೆ.

**8,136 ಲೀಟರ್ ಜಪ್ತಿ:** ಕಳೆದ ನ. 14ರಂದು ಚಾಮರಾಜಪೇಟೆಯಲ್ಲಿರುವ ಗೋದಾಮಿನ ಮೇಲೆ ದಾಳಿ ನಡೆಸಿ, ಮೊದಲಿಗೆ 8,136 ಲೀಟರ್ ನಕಲಿ ನಂದಿನಿ ತುಪ್ಪವನ್ನು ವಶಪಡಿಸಿಕೊಂಡಿದ್ದರು. ಈ ನಕಲಿ ಉತ್ಪನ್ನಗಳನ್ನು ಕೆಲ ನಂದಿನಿ ಪಾರ್ಲರ್‌ಗಳು ಮತ್ತು ಅಂಗಡಿಗಳಲ್ಲಿ ಮಾರಾಟ ಮಾಡಲಾಗುತ್ತಿತ್ತು. ಆ ಸಮಯದಲ್ಲಿ ಪ್ರಕರಣ ದಾಖಲಿಸಿ, ವಿತರಣಾ ಜಾಲದಲ್ಲಿದ್ದ ಡಿಸ್ಟಿಬ್ಯೂಟರ್ ಮಹೇಂದ್ರ, ಆತನ ಮಗ ದೀಪಕ್, ಮತ್ತು ಮುನಿರಾಜು ಸೇರಿದಂತೆ ಒಟ್ಟು ನಾಲ್ವರನ್ನು ಬಂಧಿಸಲಾಗಿತ್ತು.

ಬಂಧಿತರಾಗಿರುವ ಶಿವಕುಮಾರ್ ಮತ್ತು ರಮ್ಯಾ ದಂಪತಿಗಳು



ತಯಾರಿಸಿದ ನಕಲಿ ಉತ್ಪನ್ನಗಳನ್ನೇ ಈ ಮಹೇಂದ್ರ ಅಂಡ್ ಗ್ಯಾಂಗ್ ರಾಜ್ಯಾದ್ಯಂತ ವಿತರಿಸುತ್ತಿದ್ದರು ಎಂದು ತನಿಖೆಯಿಂದ ತಿಳಿದುಬಂದಿದೆ.

**60 ಲಕ್ಷ ಫ್ರೀಜ್:** ಪ್ರಕರಣದ ಗಂಭೀರತೆ ಅರಿತು ತನಿಖೆ ಮುಂದುವರಿಸಿರುವ ಸಿಸಿಬಿ ಪೊಲೀಸರು, ಆರೋಪಿ ದಂಪತಿಗಳ ಬ್ಯಾಂಕ್ ಖಾತೆಯಲ್ಲಿದ್ದ ಸುಮಾರು 60 ಲಕ್ಷ ರೂ ಹಣವನ್ನು ಫ್ರೀಜ್ ಮಾಡಿದ್ದಾರೆ. ಅಲ್ಲದೆ, ನಕಲಿ ತುಪ್ಪದಲ್ಲಿ ಏನೆಲ್ಲಾ ಕಳಪೆ ವಸ್ತುಗಳನ್ನು ಮಿಶ್ರಣ ಮಾಡಲಾಗಿದೆ ಎಂಬುದನ್ನು ಪತ್ತೆ ಹಚ್ಚಲು, ವಶಪಡಿಸಿಕೊಂಡ ಮಾದರಿಗಳನ್ನು ಎಫ್‌ಎಸ್‌ಎಲ್ ವಿಶ್ಲೇಷಣೆಗಾಗಿ ಕಳುಹಿಸಲಾಗಿದೆ.

ಈ ದಂಪತಿ ಮೇಲೆ ಈ ಹಿಂದೆ ಮೈಸೂರಿನಲ್ಲಿಯೂ ಇದೇ ರೀತಿಯ ನಕಲಿ ಉತ್ಪನ್ನ ತಯಾರಿಕೆಯ ಒಂದು ಕೇಸ್ ದಾಖಲಾಗಿತ್ತು ಎಂಬ ಮಾಹಿತಿ ಲಭ್ಯವಾಗಿದೆ. ಸದ್ಯಕ್ಕೆ ದಂಪತಿಗಳನ್ನು ಬಂಧಿಸಿರುವ ಸಿಸಿಬಿ ಪೊಲೀಸರು, ಈ ನಕಲಿ ಜಾಲದಲ್ಲಿ ಇನ್ನೂ ಯಾರಾದರೂ ಭಾಗಿಯಾಗಿದ್ದಾರೆಯೇ ಮತ್ತು ಈ ಉತ್ಪನ್ನಗಳು ಎಲ್ಲೆಲ್ಲಾ ವಿತರಣೆಯಾಗಿವೆ ಎಂಬ ಬಗ್ಗೆ ತೀವ್ರ ವಿಚಾರಣೆ ಮುಂದುವರಿಸಿದ್ದಾರೆ.

# ಮಾನ್ವಿ : ಬಾಲಕಿಯರ ಸರ್ಕಾರಿ ಪ್ರೌಢಶಾಲೆಯಲ್ಲಿ ಸಂವಿಧಾನ ದಿನಾಚರಣೆ



**ಮಾನ್ವಿ,ನ.26–**ಪಟ್ಟಣದ ಬಾಲಕಿಯರ ಸರ್ಕಾರಿ ಪ್ರೌಢಶಾಲೆಯಲ್ಲಿ ಸಂವಿಧಾನ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಉಪ ಪ್ರಾಂಶುಪಾಲರಾದ ಸಂಜೀವ ಸುಧಾಕರ್ ಅವರು ಮಾತನಾಡಿ, "ಭಾರತದ ಸಂವಿಧಾನವು ವಿಶ್ವದ ಶ್ರೇಷ್ಠ ಸಂವಿಧಾನಗಳಲ್ಲಿ ಒಂದಾಗಿದೆ. ಪ್ರಜಾಪ್ರಭುತ್ವದ ಮೌಲ್ಯಗಳನ್ನು ಎತ್ತಿಹಿಡಿಯುವಲ್ಲಿ ನಮ್ಮ ಸಂವಿಧಾನದ ಪಾತ್ರ ಹಿರಿದು. ವಿದ್ಯಾರ್ಥಿಗಳು ಸಂವಿಧಾನದ ಆಶಯಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು," ಎಂದು ಕರೆ ನೀಡಿದರು.

ಮುಖ್ಯ ಭಾಷಣಕಾರರಾಗಿ ಮಾತನಾಡಿದ ಶಿಕ್ಷಕಿ ಬಂಡೆಮ್ಮ ಅವರು, ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಶ್ರಮ ಮತ್ತು ತ್ಯಾಗವನ್ನು ಸ್ಮರಿಸಿದರು. ಪ್ರತಿಯೊಬ್ಬ ಪ್ರಜೆಯೂ ತಮ್ಮ ಹಕ್ಕುಗಳ ಜೊತೆಗೆ ಮೂಲಭೂತ ಕರ್ತವ್ಯಗಳ ಬಗ್ಗೆಯೂ ಜಾಗೃತಿ ಹೊಂದಿರಬೇಕು ಎಂದು ವಿದ್ಯಾರ್ಥಿಗಳಿಗೆ ತಿಳಿಹೇಳಿದರು.

ಕಾರ್ಯಕ್ರಮದ ಅಂಗವಾಗಿ ಸಾಮೂಹಿಕವಾಗಿ ಸಂವಿಧಾನದ ಪೀಠಿಕೆಯನ್ನು ಬೋಧಿಸಲಾಯಿತು.

ಈ ಸಂದರ್ಭದಲ್ಲಿ ಶಿಕ್ಷಕರಾದ ರೇಖಾದೇವಿ, ಅಶೋಕ್ ಕುಮಾರ್, ಚನ್ನಬಸವರಾಜ್, ರಜಿನಿ, ಜೈ ಭೀಮ್, ಶೇಕ್ ಹುಸೇನ್, ಅನ್ವರ್ ಹುಸೇನ್, ಶ್ರೀಮತಿ ಕಟ್ಟಿ, ಶರಣಮ್ಮ, ಪ್ರಮೋದ್ ಕುಮಾರ್, ಹಿರೇಮಣಿ, ಶರತ್ ಕುಮಾರ್, ರೇಣುಕಾ, ವಿಶಾಲಾಕ್ಷಿ ಇದ್ದರು.

# ಅರಿವು ಯಾತ್ರೆ ಅಭಿಯಾನ: ಪ್ರಿಯಾಂಕ್



**ಬೆಂಗಳೂರು ನ.26–** ಸಂವಿಧಾನ ದಿನದಂದು ಕರ್ನಾಟಕ ಸರ್ಕಾರದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು 'ಅರಿವು ಯಾತ್ರೆ' ಅಭಿಯಾನದ ಮೂಲಕ ರಾಜ್ಯದ ಪ್ರತಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಸಮುದಾಯದಲ್ಲಿ ಸಂವಿಧಾನದ ಮೂಲಭೂತ ಮೌಲ್ಯಗಳಾದ ಸ್ವಾತಂತ್ರ್ಯ, ಸಮಾನತೆ, ಬಾಂಧವ್ಯ, ನ್ಯಾಯ ಮತ್ತು ಗೌರವಗಳನ್ನು ದೈನಂದಿನ ಜೀವನದಲ್ಲಿ ಬೇರೂರಿಸುವ ಮಹತ್ವಾಕಾಂಕ್ಷಿ ಕಾರ್ಯಕ್ರಮವನ್ನು ಜಾರಿಗೊಳಿಸುವ ಮೂಲಕ ಸಂವಿಧಾನದ ಆಶಯಗಳನ್ನು ಗ್ರಾಮೀಣ ಜನಸಮುದಾಯಕ್ಕೆ ಅರಿವು ಮೂಡಿಸಲಾಗುತ್ತಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ವಿಕಾಸಸೌಧದದ ತಮ್ಮ ಕಚೇರಿ ಕೊಠಡಿಯಲ್ಲಿ ಏರ್ಪಡಿಸಲಾಗಿದ್ದ ಕಾರ್ಯಕ್ರಮದಲ್ಲಿ ಅರಿವು ಯಾತ್ರೆ ಅಭಿಯಾನಕ್ಕೆ ಚಾಲನೆ ನೀಡಿದ ಸಚಿವರು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಇತರೆ ಅನುಷ್ಠಾನ ಇಲಾಖೆಗಳು ಮತ್ತು ನಾಗರಿಕ ಸಮಾಜ ಸಂಸ್ಥೆಗಳ ಸಹಭಾಗಿತ್ವದಲ್ಲಿ ಇಡೀ ವರ್ಷ ಈ ಅಭಿಯಾನವನ್ನು ರಾಜ್ಯದ ಎಲ್ಲ ಗ್ರಾಮ ಪಂಚಾಯತಿಗಳಲ್ಲಿನ 5884 ಅರಿವು ಕೇಂದ್ರಗಳಲ್ಲಿ ನಡೆಸಲಿದ್ದು, ಅರಿವು ಕೇಂದ್ರಗಳನ್ನು ಸಾಂವಿಧಾನಿಕ ಮೌಲ್ಯಗಳನ್ನು ತಿಳಿಸುವ ಪ್ರಮುಖ ಕೇಂದ್ರಗಳನ್ನಾಗಿ ರೂಪಿಸಲು ವಿನ್ಯಾಸಗೊಳಿಸಲಾಗಿದೆ ಎಂದು ಸಚಿವರು ಈ ಸಂದರ್ಭದಲ್ಲಿ ಹೇಳಿದರು.

ಪ್ರತಿ ಗ್ರಾಮ ಪಂಚಾಯತ್ ಮತ್ತು ವಾರ್ಡ್ ಮಟ್ಟದಲ್ಲಿ ಸಂವಿಧಾನಿಕ ಮೌಲ್ಯಗಳನ್ನು ಸಾಂಸ್ಥಿಕಗೊಳಿಸುವುದು; ಗೌರವ, ಸಮಾನತೆ, ಬಾಂಧವ್ಯವನ್ನು ಪಾಲಿಸುವ ಮತ್ತು ಗ್ರಾಮ ಸಭೆಗಳಂತಹ ಪ್ರಜಾಪ್ರಭುತ್ವ ಪ್ರಕ್ರಿಯೆಯಲ್ಲಿ ಸಕ್ರಿಯವಾಗಿ ಭಾಗವಹಿಸುವ ನಾಗರಿಕರ ಬಲವನ್ನು ನಿರ್ಮಿಸುವುದು; ಸಮಾಜದ ಶಾಂತಿ ಮತ್ತು ಆರ್ಥಿಕ ಪ್ರಗತಿಗೆ ಬಾಂಧವ್ಯವು ಅತಿ ಮುಖ್ಯವೆಂಬುದನ್ನು ಒತ್ತಿಹೇಳುವುದು; ಹಕ್ಕುಗಳು ಮತ್ತು ಸರ್ಕಾರದ ಯೋಜನೆಗಳು ಪ್ರತಿಯೊಬ್ಬ ನಾಗರಿಕನಿಗೂ ಸಮರ್ಪಕವಾಗಿ ಲಭ್ಯವಾಗುವಂತೆ ಮಾಡುವುದು ಹಾಗೂ ಕರ್ನಾಟಕವನ್ನು ಪ್ರಗತಿಪರ ಸುಧಾರಣೆಗಳಲ್ಲಿ ರಾಷ್ಟ್ರೀಯ ಮಾದರಿಯಾಗಿ ರೂಪಿಸುವುದು ಈ ಆಂದೋಲನದ ಪ್ರಮುಖ ಉದ್ದೇಶವಾಗಿದೆ ಎಂದು ಸಚಿವರು ವಿವರಿಸಿದರು.

ಅಭಿಯಾನದ ಪ್ರಾರಂಭಿಕ ಹಂತದಲ್ಲಿ 5,884 ಅರಿವು ಕೇಂದ್ರಗಳ ಮೇಲ್ವಿಚಾರಕರಿಗೆ ಹಾಗೂ ಸ್ವ–ಸಹಾಯ ಸಂಘದ ಮಹಿಳೆಯರು, ನರೇಗಾ ಕಾರ್ಮಿಕರು, ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರಿಗೂ ತರಬೇತಿ ನೀಡಲಾಗುವುದು ಎಂದೂ ಸಚಿವರು ಪ್ರಕಟಿಸಿದರು.

ರಾಜ್ಯದ ಎಲ್ಲ ಗ್ರಾಮ ಪಂಚಾಯತಿಗಳ ಅಧ್ಯಕ್ಷರು, ಉಪಾಧ್ಯಕ್ಷರು, ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಕಾರ್ಯಕ್ರಮದ ನೇರ ಪ್ರಸಾರದಲ್ಲಿ ಪಾಲ್ಗೊಂಡಿದ್ದರು. ಸಂವಿಧಾನ ಪೀಠಿಕೆ ಭಾಗವನ್ನು ವಾಚನ ಮಾಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಸಂವಿಧಾನ ಜಾಗೃತಿ ಹಾಡುಗಳ ಗಾಯನ ಪ್ರಸ್ತುತ ಪಡಿಸಲಾಯಿತು. ಶಿಗ್ಗಾವಿ ಶಾಸಕ ಯಾಸೀರ್ ಅಹಮದ್ ಖಾನ್ ಪಠಾಣ್, ಕರ್ನಾಟಕ ಸರ್ಕಾರದ ಅಭಿವೃದ್ಧಿ ಆಯುಕ್ತರಾ ಡಾ. ಉಮಾ ಮಹದೇವನ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಕಾರ್ಯದರ್ಶಿ ಸಮೀರ್ ಶುಕ್ಲಾ, ಪಂಚಾಯತ್ ರಾಜ್ ಇಲಾಖೆಯ ಕಾರ್ಯದರ್ಶಿ ಡಿ.ರಂದೀಪ್, ಪಂಚಾಯತ್ ರಾಜ್ ಆಯುಕ್ತೆ ಡಾ.ಅರುಂಧತಿ ಚಂದ್ರಶೇಖರ್ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

# 7 ಕೋಟಿ ರೂ. ದರೋಡೆ ಪ್ರಕರಣ : ಹಣ ಬಚ್ಚಿಟ್ಟಿದ್ದ ಜಾಗದಲ್ಲಿ ಪೊಲೀಸರ ಶೋಧ



**ಬೆಂಗಳೂರು,ನ.26–** ಸಿಎಂಎಸ್ ವಾಹನದಿಂದ ಹಾಡಹಗಲೇ ದರೋಡೆ ಮಾಡಿದ್ದ ಹಣದ ಪೈಕಿ 9.75 ಲಕ್ಷ ಹಣ ಎಲ್ಲಿ ಬಚ್ಚಿಟ್ಟಿ ದ್ದಾರೆಂಬ ಬಗ್ಗೆ ದಕ್ಷಿಣ ವಿಭಾಗದ ಪೊಲೀಸರು ಶೋಧ ಮುಂದುವರೆಸಿದ್ದಾರೆ.ಈ ಪ್ರಕರಣದಲ್ಲಿ ಇದುವರೆಗೂ ಒಂಬತ್ತು ಮಂದಿಯನ್ನು ಬಂಧಿಸಿ 7,01,25000 ರೂ. ಹಣವನ್ನು ಪತ್ತೆ ಹಚ್ಚಿ ವಶಪಡಿಸಿಕೊಂಡಿದ್ದು, ಉಳಿದ ಹಣ ಇನ್ನೂ ಸಿಕ್ಕಿಲ್ಲ.

ನಗರ ಹೊರವಲಯದ ಹೊಸಕೋಟೆ ಸುತ್ತಾಮುತ್ತಾ ನಿನ್ನೆಯಿಂದ ಪೊಲೀಸರು ವ್ಯಾಪಕ ಶೋಧ ನಡೆಸುತ್ತಿದ್ದಾರೆ.ದರೋಡೆಕೋರರು ಅಂದು 7.11 ಕೋಟಿ ಹಣವನ್ನು ದರೋಡೆ ಮಾಡಿಕೊಂಡು ಕೆಆರ್‌ಪುರದ ಬಟ್ಟರಹಳ್ಳಿ ಮಾರ್ಗವಾಗಿ ಹೊರವಲಯಕ್ಕೆ ಸಂಚರಿಸಿ ಹೊಸಕೋಟೆ ಸಮೀಪದ ಪಾಳು ಮನೆಯಲ್ಲಿ ಮೂರನೇ ಒಂದು ಭಾಗದಷ್ಟು ಹಣ ಬಚ್ಚಿಟ್ಟು ಟ್ರಂಕ್‌ಗಳನ್ನು ಬಿಸಾಡದೆ ಪರಾರಿಯಾಗಿದ್ದರು.

ದರೋಡೆಗೆ ಸಂಚು ರೂಪಿಸಿದವರು ಹಾಗೂ ದರೋಡೆ ಮಾಡಿದವರನ್ನು ಬೆನ್ನಟ್ಟಿದ್ದ ಪೊಲೀಸರು ಇದುವರೆಗೂ 9 ಮಂದಿಯನ್ನು ಬಂಧಿಸಿ 7,01,25000 ರೂ. ಹಣವನ್ನು ವಶಪಡಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ನಿನ್ನೆ ಈ ಪ್ರಕರಣದ ಬಗ್ಗೆ ವಿವರಣೆ ನೀಡಿರುವ ನಗರ ಪೊಲೀಸ್ ಆಯುಕ್ತ ಸೀಮಂತ್‌ಕುಮಾರ್ ಸಿಂಗ್ ಅವರು, ದರೋಡೆಯಾಗಿರುವ ಉಳಿದ ಹಣವನ್ನು ಪತ್ತೆ ಹಚ್ಚದೇ ಬಿಡುವುದಿಲ್ಲ . ತನಿಖಾ ತಂಡಗಳು ವ್ಯಾಪಕ ಶೋಧ ನಡೆಸುತ್ತಿವೆ ಎಂದು ಹೇಳಿದ್ದಾರೆ.

ಬಂಧಿತರಾಗಿರುವ ದರೋಡೆಕೋರರನ್ನು ಉಳಿದ ಹಣದ ಬಗ್ಗೆ ವಿಚಾರಣೆ ನಡೆಸಿದರಾದರೂ ಹಣದ ಬಗ್ಗೆ ಮಾಹಿತಿ ನೀಡದಿರುವುದು ಪೊಲೀಸರಿಗೆ ತಲೆನೋವಾಗಿ ಪರಿಣಮಿಸಿದೆ.



**ಮುದಗಲ್ ಪಟ್ಟಣದ ಕಿಲ್ಲಾದಲ್ಲಿರುವ ಸಹನಾ ಆಂಗ್ಲ ಮಾಧ್ಯಮ ಸಹನಾ ಶಾಲೆಯಲ್ಲಿ ಸಂವಿಧಾನ ದಿನಾಚರಣೆಯನ್ನು ಆಚರಿಸಲಾಯಿತು. ಕಾರ್ಯಕ್ರಮವನ್ನು ಡಾ. ಬಿ .ಆರ್ ಅಂಬೇಡ್ಕರ್ ಹಾಗೂ ಸಂವಿಧಾನ ಪೀಠಿಕೆ ಭಾವಚಿತ್ರಕ್ಕೆ ಶಾಲಾ ಶಿಕ್ಷಕಿಯರಾದ ನಿಲುಬಾಯಿ ಮತ್ತು ಕವಿತಾ ಪೂಜೆ ಸಲ್ಲಿಸುವುದರ ಮೂಲಕ ಚಾಲನೆ ನೀಡಲಾಯಿತು. ಶಾಲೆಯ ಮುಖ್ಯ ಗುರುಗಳಾದ ಆದಪ್ಪ ಸರ್ ಅವರು ಸಂವಿಧಾನ ಪೀಠಿಕೆಯನ್ನು ಮಕ್ಕಳಿಂದ ಓದಿಸಿದರು. ನಂತರದಲ್ಲಿ ಭಾರತದ ಸಂವಿಧಾನದ ಬಗ್ಗೆ ಶಾಲೆಯ ಶಿಕ್ಷಕಿಯರಾದ ಕಾವೇರಿ, ಪ್ರಿಯಾಂಕ ಮಾತನಾಡಿದರು. ಕಾರ್ಯಕ್ರಮವನ್ನು ಶಾಲೆಯ ಶಿಕ್ಷಕಿಯಾದ ಆಯೇಶಾ ಬಾನು ನಿರೂಪಿಸಿದರು. ನಂತರದಲ್ಲಿ ಮಕ್ಕಳಿಗೆ ಸಿಹಿ ಹಂಚಲಾಯಿತು.**



**ಮಾನ್ವಿಯ ಮತವಾಲೆ ಸಾಹೇಬ್ ಪಬ್ಲಿಕ್ ಶಾಲೆಯಲ್ಲಿ ಸಂವಿಧಾನ ಪ್ರತಿಜ್ಞಾವಿಧಿಯನ್ನು ಸ್ವೀಕರಿಸಲಾಯಿತು**



**ಮಾನವಿಯ ವೆಂಕಟೇಶ್ವರ ಕಾಲೇಜಿನಲ್ಲಿ ಸಂವಿಧಾನ ದಿನಾಚರಣೆ ಮಾಡುತ್ತಾ ಪೂರ್ವ ಪೀಠಿಕೆ ಪ್ರತಿಜ್ಞೆಸ್ವೀಕರಿಸಲಾಯಿತು.**

# ಲೊಯೋಲ ಶಿಕ್ಷಣ ಸಂಸ್ಥೆಯಲ್ಲಿ ಸಂವಿಧಾನ ಸಮರ್ಪಣಾ ದಿನಾಚರಣೆ ಆಚರಣೆ

**ಮಾನ್ವಿ,ನ.26–**ಇಂದು ಪಟ್ಟಣದ ಪ್ರಸಿದ್ದ ಶಿಕ್ಷಣ ಸಂಸ್ಥೆಗಳಲ್ಲಿ ಒಂದಾದ ಲೊಯೋಲ ಶಿಕ್ಷಣ ಸಂಸ್ಥೆಯಲ್ಲಿ ವಿಭಿನ್ನ ರೀತಿಯಲ್ಲಿ ಸಂವಿಧಾನ ಸಮರ್ಪಣಾ ದಿನಾಚರಣೆಯನ್ನು ಆಚರಿಸಲಾಯಿತು.

ಕಾರ್ಯಕ್ರಮಕ್ಕೆ ಸಂಪನ್ಮೂಲ ವ್ಯಕ್ತಿಯಾಗಿ ಶ್ರೀ ಯಲ್ಲಪ್ಪ ಹೀರೆಬಾದರದಿನ್ನಿ ವಕೀಲರು ಮತ್ತು ಪ್ರಧಾನ ಕಾರ್ಯದರ್ಶಿಗಳು ತಾಲೂಕ ವಕೀಲರ ಸಂಘ ಮಾನವಿ ಇವರು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಾ ಸಂವಿಧಾನ ರಚನೆಯಲ್ಲಿ ಡಾ॥ಬಿ.ಆರ್.ಅಂಬೇಡ್ಕರ್ ಅವರ ಪಾತ್ರ ಹಾಗೂ ಅವರ ತಂಡ ಪಟ್ಟ ಕಷ್ಟಗಳ ಕುರಿತು ವಿವರಿಸಿದರು. ಸಂವಿಧಾನದ ಆಶಯ ಮೂಲಭೂತ ಹಕ್ಕುಗಳು ಹಾಗೂ ಕರ್ತವ್ಯಗಳ ಬಗ್ಗೆ ಮಾತನಾಡುತ್ತಾ ನಮ್ಮ ಸಂವಿಧಾನವು ಧೀರ್ಘ ಮತ್ತು ಬರವಣಿಗೆಯ ಸಂವಿಧಾನವಾಗಿದೆ.

ಇದನ್ನು ಯಾವುದೇ ದೇಶಗಳ ಸಂವಿಧಾನಕ್ಕೆ ಹೋಲಿಸಲು ಸಾಧ್ಯವಿಲ್ಲ. ಸಂಸ್ಥೆಯಗಳು ಇಂತಹ ವಿಭಿನ್ನ ರೀತಿಯಾದ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಮಕ್ಕಳಲ್ಲಿ ಸಂವಿಧಾನದ ಕುರಿತು ಅರಿವು ಹಾಗೂ ಜಾಗೃತಿ ಮೂಡಿಸುವಂತಹ ಕಾರ್ಯ ಮಾಡುತ್ತಿರುವುದು ಜೊತೆಗೆ ಮಾಡುವುದು ಕೂಡಾ ತುಂಬಾ ಅವಶ್ಯಕ ಎಂದರು.

ಕಾರ್ಯಕ್ರಮಕ್ಕೆ ಪೂರ್ವದಲ್ಲಿ ಮಾನ್ವಿ ತಾಲೂಕಿನ ವಿವಿಧ ಪ್ರೌಢ ಶಾಲೆಗಳಿಂದ ಸ್ಪರ್ಧೆಗಳಲ್ಲಿ ಭಾಗವಹಿಸಲು ಆಗಮಿಸಿದ್ದ ವಿದ್ಯಾರ್ಥಿಗಳಿಗೆ ಕೊಲಾಜ್, ಪೇಸ್ ಪೇಂಟಿಂಗ್, ಆಶು ಭಾಷಣ, ರಂಗೋಲಿ ಮತ್ತು ಮಾದರಿ ಪ್ರದರ್ಶನ ಈ ಎಲ್ಲಾ ಸ್ಪರ್ಧೆಗಳಿಗೆ ಸಂವಿಧಾನ ವಿಷಯ ವಸ್ತುವನ್ನಿಟ್ಟು ಸ್ಪರ್ಧೆಗಳನ್ನು ಆಯೋಜಿಸಲಾಗಿತ್ತು. ಈ ಸ್ಪರ್ಧೆಗಳಿಗೆ ಕಲ್ಮಠ ಶಾಲೆ, ಗಾಂಧೀ ಸ್ಮಾರಕ ಶಾಲೆ, ಸರಕಾರಿ ಬಾಲಕರ ಪ್ರೌಢ ಶಾಲೆ, ಸರಕಾರಿ ಪ್ರೌಢ ಶಾಲೆ ಕೋನಾಪುರ ಪೇಟ್, ಲೊಯೋಲ ಕಾಪೆಪಲಾಡಿ ಶಾಲೆ ಜಾಗೀರ ಪನ್ನೂರು, ಲೊಯೋಲ ಶಾಲೆ ಮಾನ್ವಿ ಹಾಗೂ ಕ್ಸೇವಿಯರ್ ಶಾಲೆ ಮಾನ್ವಿ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಗೆದ್ದ ವಿದ್ಯಾರ್ಥಿಗಳಿಗೆ ಬಹುಮಾನ ಹಾಗೂ ಪ್ರಮಾಣ ಪತ್ರ ಮತ್ತು ಭಾಗವಹಿಸಿದ ಎಲ್ಲಾ ವಿದ್ಯಾರ್ಥಿಗಳಿಗೆ ಅಭಿನಂದನಾ ಪ್ರಮಾಣ ಪತ್ರಗಳನ್ನು ವಿತರಿಸಿಲಾಯಿತು.

ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿದ್ದ ಫಾ.ಅ



ವಿನಾಶ, ಫಾ. ವಿನೋದ ಪೌಲ್ ಪ್ರಾಂಶುಪಾಲರು ಲೊಯೋಲ ಪದವಿ ಕಾಲೇಜು, ಫಾ. ಪ್ರವೀಣ್ ಕುಮಾರ್ ಪ್ರಾಂಶುಪಾಲರು ಲೊಯೋಲ ಪದವಿ ಕಾಲೇಜು, ಫಾಸಿರಿಲ್ ರಾಜ್ ನಿರ್ದೇಶಕರು ಲೊಯೋಲ ಶಾಲೆ, ಫಾ.ವಿಲ್ಸನ್ ಬೆನ್ನಿಸ್, ಮುಖ್ಯೋಪಾಧ್ಯಾಯರು ಕ್ಸೇವಿಯರ್ ಶಾಲೆ, ಶಾಂತಯ್ಯ ಸ್ವಾಮಿ ಹೀರೆಮಠ ದೈಹಿಕ ಶಿಕ್ಷಕರು ಕಲ್ಮಠ ಪ್ರೌಢ ಶಾಲೆ, ಸಿ ಜೂಲಿಯಟ್ ಮೋಂಥೆರೋ ಮುಖ್ಯೋಪಾಧ್ಯಾಯಿನಿ ಲೊಯೋಲ ಶಾಲೆ ಮಾನ್ವಿ ಫಾ. ಜಾರ್ಜ ಪಿಂಟೋ ಸಹಾಯಕ ನಿರ್ದೇಶಕರು ಲೊಯೋಲ ಸಮಾಜ ಸೇವಾ ಕೇಂದ್ರ ಇವರು ಭಾಗವಹಿಸಿದ್ದರು. ಕಾರ್ಯಕ್ರಮವನ್ನು ಮರಿಯಪ್ಪ ಇವರು ನಿರೂಪಿಸಿದರು, ರಕ್ಷಿತಾ ಸ್ವಾಗತಿಸಿದರು ಹಾಗೂ ಶ್ರೀಮತಿ ವಿಜಯಲಕ್ಷ್ಮೀ ಇವರು ವಂದಿಸಿದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE